ಸಂಪುಟ : 10 ಸಂಚಿಕೆ: 99 ಪುಟ : 4+2 ಬೆಲೆ: 3.00 ಮಂಗಳವಾರ ಮೇ 20 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 99 Pages : 4+2 Price : 3.00 Tuesday May 20 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಿಎಂ ಸಿದ್ದರಾಮಯ್ಯ ಇಂದು ಹೊಸಪೇಟೆಗೆ

■ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೇ.20ರಂದು ಹೊಸಪೇಟೆ ನಗರಕ್ಕೆ ಆಗಮಿಸಲಿದ್ದು, ಕಂದಾಯ ಇಲಾಖೆ ಮತ್ತು ವಿಜಯನಗರ ಜಿಲ್ಲಾಡಳಿತದ ವತಿಯಿಂದ ಆಯೋಜಿಸಲಾಗಿರುವ 'ಪ್ರಗತಿಯತ್ತ ಕರ್ನಾಟಕ ಸಮರ್ಪಣೆ ಸಂಕಲ್ಪ' ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾರೆ.

ಬೆಳಿಗ್ಗೆ 9 ಗಂಟೆಗೆ ಬೆಂಗಳೂರಿನ ಹೆಚ್.ಎ.ಎಲ್. ವಿಮಾನ ನಿಲ್ದಾಣದಿಂದ ವಿಶೇಷ ವಿಮಾನದ ಮೂಲಕ ಹೊರಡುವ ಅವರು, 9.50ಕ್ಕೆ ಬಳ್ಳಾರಿ ಜಿಲ್ಲೆಯ ತೋರಣಗಲ್ಲಿನ ಜಿಂದಾಲ್ ಏರ್‌ಸ್ಟ್ರಿಪ್‌ಗೆ ಆಗಮಿಸುವರು. ಬೆಳಿಗ್ಗೆ 11.15ಕ್ಕೆ ಜಿಂದಾಲ್ ಏರ್‌ಸ್ಟ್ರಿಪ್‌ನಿಂದ ಹೆಲಿಕಾಪ್ಟರ್ ಮೂಲಕ ಹೊರಟು, 11:30ಕ್ಕೆ ಹೊಸಪೇಟೆ ನಗರದ ಭಟ್ಟರಹಳ್ಳಿ ಆಂಜನೇಯ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಹೆಲಿಪ್ಯಾಡ್‌ಗೆ ಬಂದಿಳಿಯುವರು.

ನಂತರ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಕಂದಾಯ ಇಲಾಖೆ ಮತ್ತು ವಿಜಯನಗರ ಜಿಲ್ಲಾಡಳಿತ ವತಿಯಿಂದ ಜರುಗಲಿರುವ 'ಪ್ರಗತಿಯತ್ತ ಕರ್ನಾಟಕ-ಸಮರ್ಪಣೆ ಸಂಕಲ್ಪ', ನೆಮ್ಮದಿ ಕಂದಾಯ ಗ್ರಾಮ ಹಕ್ಕುಪತ್ರ ಸಮರ್ಪಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಮದ್ಯಾಹ್ನ 3 ಗಂಟೆಗೆ ಭಟ್ಟರಹಳ್ಳಿ ಆಂಜನೇಯ ಸ್ವಾಮಿ ದೇವಸ್ಥಾನದ ಆವರಣ ಹೆಲಿಪ್ಯಾಡ್‌ನಲ್ಲಿ ಹೆಲಿಕ್ಯಾಪ್ಟರ್ ಮೂಲಕ 03:15ಕ್ಕೆ ಜಿಂದಾಲ್ ಏರ್‌ಸ್ಟ್ರಿಪ್ ತೋರಣಗಲ್ಲು ತಲುಪಿ 03:20ಕ್ಕೆ ವಿಶೇಷ ವಿಮಾನದಲ್ಲಿ ಹೆಚ್‌ಎಎಲ್ ವಿಮಾನ ನಿಲ್ದಾಣಕ್ಕೆ ಮರಳಲಿದ್ದಾರೆ.

### ಗ್ಯಾರಂಟಿ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷ ಎಸ್.ಆರ್. ಪಾಟೀಲರಿಂದ ಪ್ರಗತಿ ಪರಿಶೀಲನಾ ಸಭೆ

# ಗದಗ ಜಿಲ್ಲೆಯ ಸಾಧನೆ ಅನನ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ಸರ್ಕಾರ ಬಡವರ ಕಲ್ಯಾಣಕ್ಕಾಗಿ ಜಾರಿಗೊಳಿಸಿದ ಪಂಚ ಗ್ಯಾರಂಟಿ ಯೋಜನೆಗಳನ್ನು ಗದಗ ಜಿಲ್ಲೆಯಲ್ಲಿ ಉತ್ತಮವಾಗಿ ಅನುಷ್ಠಾನಗೊಳಿಸಲಾಗಿದೆ. ಗದಗ ಜಿಲ್ಲೆಯ ಈ ಸಾಧನೆ ಪ್ರಶಂಸನೀಯ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಎಸ್.ಆರ್. ಪಾಟೀಲ ಹೇಳಿದರು.

ನಗರದ ಉಪವಿಭಾಗಾಧಿಕಾರಿಗಳ ಕಚೇರಿ ಆವರಣದಲ್ಲಿರುವ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ ಕಚೇರಿಯಲ್ಲಿ ಸೋಮವಾರ ಜರುಗಿದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಂಚ ಗ್ಯಾರಂಟಿ ಅನುಷ್ಠಾನದಲ್ಲಿ ಗದಗ ಜಿಲ್ಲೆ ರಾಜ್ಯದಲ್ಲಿಯೇ ಉತ್ತಮ ಸಾಧನೆ ಮಾಡಿದೆ. ಅರ್ಹರಿಗೆ ಸರ್ಕಾರದ ಸೌಲಭ್ಯ ಒದಗಿಸುವಲ್ಲಿ ಜಿಲ್ಲೆಯು ಮುಂಚೂಣಿಯಲ್ಲಿದೆ. ಅದಕ್ಕಾಗಿ ಸಮಿತಿಯ ಜಿಲ್ಲಾ ಹಾಗೂ ತಾಲೂಕಾ ಅಧ್ಯಕ್ಷರು, ಸದಸ್ಯರುಗಳು ಅಭಿನಂದನಾರ್ಹರು ಎಂದರಲ್ಲದೆ, ಪಂಚ ಗ್ಯಾರಂಟಿ ಅನುಷ್ಠಾನದಲ್ಲಿ ಶ್ರಮಿಸಿದ ಇಲಾಖಾಧಿಕಾರಿಗಳ ಕಾರ್ಯ ವೈಖರಿಗೆ ಮೆಚ್ಚುಗೆ ವ್ಯಕ್ತಪಡಿಸಿದರು.




> ರಾಜ್ಯದ ಮಹಿಳೆಯರಿಗೆ ಗೃಹಲಕ್ಷ್ಮೀ ಹಾಗೂ ಶಕ್ತಿ ಯೋಜನೆಗಳು ಆರ್ಥಿಕ ಸಬಲತೆಯೊಂದಿಗೆ ಸ್ತ್ರೀ ಸ್ವಾತಂತ್ರ್ಯ ನೀಡಿದೆ. ಮಹಿಳೆ ಸ್ವತಂತ್ರವಾಗಿ ಕುಟುಂಬ ನಿರ್ವಹಣೆ ಮಾಡುವ ಮೂಲಕ ಕುಟುಂಬವನ್ನು ಆರ್ಥಿಕವಾಗಿ ಪ್ರಬಲವಾಗಿಸಲು ಪಂಚ ಗ್ಯಾರಂಟಿ ಯೋಜನೆಗಳು ಸಹಕಾರಿಯಾಗಿವೆ. ಅವುಗಳನ್ನು ಇನ್ನಷ್ಟು ಅರ್ಹರಿಗೆ ತಲುಪಿಸುವಲ್ಲಿ ಅಧಿಕಾರಿ ವರ್ಗ ಶ್ರಮಿಸಬೇಕು.
>
> – ಎಸ್.ಆರ್. ಪಾಟೀಲ.
> ಗ್ಯಾರಂಟಿ ಪ್ರಾಧಿಕಾರದ ಉಪಾಧ್ಯಕ್ಷ.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮರ್ಪಕವಾಗಿ ಸಾಗಿದೆ. ಯುವನಿಧಿ ಫಲಾನುಭವಿಗಳು ಉದ್ಯೋಗ ಮೇಳಕ್ಕೆ ಆಗಮಿಸುವ ಮೂಲಕ ಉದ್ಯೋಗ ಪಡೆಯಲು ಮುಂದಾಗಬೇಕು. ಈ ನಿಟ್ಟಿನಲ್ಲಿ ಉದ್ಯೋಗಾದಿಕಾರಿಗಳು ಸೂಕ್ತ ಕ್ರಮ ವಹಿಸಬೇಕೆಂದು ಸೂಚಿಸಿದರು.

ಅನ್ನಭಾಗ್ಯ ಯೋಜನೆಯಡಿ ವಿತರಿಸಲಾಗುವ ಅಕ್ಕಿಯನ್ನು ಅಕ್ರಮ ಕಾಳ ಸಂತೆಗೆ ಸಾಗಾಟ ಮಾಡುವುದನ್ನು ಅಧಿಕಾರಿ ವರ್ಗ ಸಂಪೂರ್ಣ ಹತೋಟಿಗೆ ತರಬೇಕು. ಆ ಮೂಲಕ ಅರ್ಹ ಅನ್ನಭಾಗ್ಯ ಫಲಾನುಭವಿಗಳಿಗೆ ತಲುಪುವ ಮೂಲಕ ಹಸಿವು ಮುಕ್ತ ಕರ್ನಾಟಕದ ಸಂಕಲ್ಪ ಸಾಕಾರವಾಗಲಿ ಎಂದರು.

ಪ್ರಾಧಿಕಾರದ ತಾಲೂಕಾಧ್ಯಕ್ಷ ಅಶೋಕ ಮಂದಾಲಿ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳನ್ನು ಸದ್ಬಳಕೆ ಮಾಡಿಕೊಳ್ಳುವ ಮೂಲಕ ಫಲಾನುಭವಿಗಳು ತಮ್ಮದೇ ರೀತಿಯ ಆರ್ಥಿಕ ಸಂಪನ್ಮೂಲ ಕಂಡುಕೊಂಡಿದ್ದಾರೆ. ಹಲವಾರು ಮಹಿಳೆಯರು ಸ್ವ ಉದ್ಯೋಗ ಕೈಗೊಂಡ ಸಾಕಷ್ಟು ಉದಾಹರಣೆಗಳು ಜಿಲ್ಲೆಯಲ್ಲಿವೆ ಎಂದರು.

ಸಮಿತಿಯ ಸದಸ್ಯ ಕೃಷ್ಣಗೌಡ ಎಚ್.ಪಾಟೀಲ ಮಾತನಾಡಿ, ಕೆಲವು ಫಲಾನುಭವಿಗಳ ಗೃಹಲಕ್ಷ್ಮೀ ಮೊತ್ತವು ಬ್ಯಾಂಕ್ ಖಾತೆಗೆ ಜಮೆಯಾಗದೇ ಇರುವ ಪ್ರಕರಣಗಳು ಕಂಡುಬಂದಿವೆ. ಅಧಿಕಾರಿ ವರ್ಗ ಅವುಗಳನ್ನು ಪರಿಶೀಲಿಸಿ ಅರ್ಹರಿಗೆ ಗೃಹಲಕ್ಷ್ಮೀ ಮೊತ್ತ ಜಮೆ ಮಾಡಿಸುವಲ್ಲಿ ಗಮನ ಹರಿಸುವಂತೆ ತಿಳಿಸಿದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ನೀಲವ್ವ ಬೋಳನವರ್, ಸದಸ್ಯರುಗಳಾದ ಈಶಣ್ಣ ಹುಣಸೀಕಟ್ಟಿ, ಸಂಗಮೇಶ ಹಾದಿಮನಿ, ರಮೇಶ ಹೊನ್ನಿನಾಯ್ಕರ, ದೇಸಾಯಿ, ಸಾವಿತ್ರಿ ಹೂಗಾರ ಸೇರಿದಂತೆ ಇತರೆ ಸದಸ್ಯರು, ಅಧಿಕಾರಿಗಳು ಹಾಜರಿದ್ದರು.

**ಯೋಜನೆಗಳ ಪ್ರಗತಿ ವಿವರ**

ಗೃಹಲಕ್ಷ್ಮೀ ಯೋಜನೆಯಡಿ ಶೇ 92.02, ಅನ್ನಭಾಗ್ಯ ಯೋಜನೆಯಡಿ ಶೇ 97.96, ಗೃಹ ಜ್ಯೋತಿ ಯೋಜನೆಯಡಿ ಶೇ 95.51, ಯುವ ನಿಧಿ ಯೋಜನೆಯಡಿ ಶೇ 98 ಹಾಗೂ ಶಕ್ತಿ ಯೋಜನೆಯಡಿ ಶೇ 100ರಷ್ಟು ಪ್ರಗತಿ ಸಾಧನೆಯಾಗಿದೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ಒದಗಿಸಿದರು.

## ಆಸಕ್ತ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯ ಶ್ರೀ ಜಗದ್ಗುರು ಫಕೀರೇಶ್ವರ ಭಾವೈಕ್ಯತಾ ಮಹಾಸಂಸ್ಥಾನಪೀಠದಿಂದ ವೈದಿಕ, ಜ್ಯೋತಿಷ್ಯ, ಸಂಗೀತ, ಪುರಾಣ ಪ್ರವಚನ, ಆಯುರ್ವೇದ ಅಭ್ಯಾಸಕ್ಕಾಗಿ ಪ್ರವೇಶ ಕೋರಲಾಗಿದೆ.

ಈ ವಿಷಯಗಳ ಕುರಿತು ಅಧ್ಯಯನ ಮಾಡಲಿಚ್ಛಿಸುವ, ಆಧ್ಯಾತ್ಮ ಮಾರ್ಗದಲ್ಲಿ ಆಸಕ್ತಿಯುಳ್ಳ ಸಮಾಜಸೇವಾ ಮನೋಭಾವ ಮತ್ತು ಆಸಕ್ತಿ ಹೊಂದಿರುವ ತರುಣರು ಹಾಗೂ ತರುಣಿಯರು ಪ್ರವೇಶ ಪಡೆಯಬಹುದು. ಎಸ್‌ಎಸ್‌ಎಲ್‌ಸಿ ಪಾಸ್ ಮತ್ತು ಫೇಲಾದ ವಿದ್ಯಾರ್ಥಿಗಳೂ ಪ್ರವೇಶಕ್ಕೆ ಅರ್ಹರು. ಕನ್ನಡ ಭಾಷಾ ಜ್ಞಾನ ಕಡ್ಡಾಯವಾಗಿದ್ದು, ತರಬೇತಿಯ ಅವಧಿಯು 5 ವರ್ಷಗಳದ್ದಾಗಿರುತ್ತದೆ. ಆಸಕ್ತ ವಿದ್ಯಾರ್ಥಿಗಳು ಜೂನ್ 1ರೊಳಗೆ ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ. ಬುದ್ಧಿಮಾಂದ್ಯರಿಗೆ, ವ್ಯಸನಾದಿಗಳಿಗೆ ಪ್ರವೇಶವಿಲ್ಲ, ಶ್ರೀಮಠದ ನಿಯಮಗಳಿಗೆ ಬದ್ಧರಾಗಿರಬೇಕು ಮತ್ತು ಕರ್ಮ ಯೋಗ ಕಡ್ಡಾಯವಾಗಿರುತ್ತದೆ. ಹೆಚ್ಚಿನ ಮಾಹಿತಿಗಳಿಗೆ 9353930450, 9448753427 ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

## ಸಾರಿಗೆ ವ್ಯವಸ್ಥೆಯಲ್ಲಿ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಮೇ. 20ರಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವ್ಯಾಪ್ತಿಯ ವಿವಿಧ ವಿಭಾಗಗಳಿಂದ (ಉತ್ತರ ಕನ್ನಡ, ಚಿಕ್ಕೋಡಿ ವಿಭಾಗ ಹೊರತುಪಡಿಸಿ) ಹೊಸಪೇಟೆಯಲ್ಲಿ ಆಯೋಜಿಸಿರುವ ಸರ್ಕಾರಿ ಕಾರ್ಯಕ್ರಮಕ್ಕೆ ಪ್ರಾಸಂಗಿಕ ಕರಾರಿನ ಮೇರೆಗೆ ಸಂಸ್ಥೆಯ 977 ವಾಹನಗಳನ್ನು ಒದಗಿಸಲಾಗುತ್ತಿರುವುದರಿಂದ ಸದರಿ ದಿನದಂದು ಸಾರಿಗೆ ವ್ಯವಸ್ಥೆಯಲ್ಲಿ ವ್ಯತ್ಯಯ ಉಂಟಾಗಲಿದೆ. ಕಾರಣ ಸಾರ್ವಜನಿಕ ಪ್ರಯಾಣಿಕರು ಸಂಸ್ಥೆಯೊಂದಿಗೆ ಸಹಕರಿಸುವಂತೆ ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ-2025 ಕುರಿತ ಪೂರ್ವಭಾವಿ ಸಭೆಯಲ್ಲಿ ಡಿಸಿ ಸಿ.ಎನ್. ಶ್ರೀಧರ್

# ಸಮೀಕ್ಷೆದಾರರಿಗೆ ಮಾಹಿತಿ ನೀಡಿ ಸಹಕರಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ-2025 ಕುರಿತಂತೆ ಸಮೀಕ್ಷೆದಾರರಿಂದ ಮನೆ ಮನೆ ಭೇಟಿ ದಿನಾಂಕವನ್ನು ಮೇ 25ರವರೆಗೆ ವಿಸ್ತರಿಸಲಾಗಿದ್ದು, ಸಮೀಕ್ಷೆದಾರರಿಗೆ ಮಾಹಿತಿ ನೀಡಿ ಸಹಕರಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸೋಮವಾರ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ-2025 ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮನೆ ಮನೆಯ ಭೇಟಿಯ ಸಂದರ್ಭದಲ್ಲಿ ತಮ್ಮ ಮಾಹಿತಿಯನ್ನು ಒದಗಿಸದೇ ಇದ್ದಲ್ಲಿ ಮೇ 26, 27, 28ರಂದು ವಿಶೇಷ ಶಿಬಿರಗಳಲ್ಲಿ ಮಾಹಿತಿ ನೀಡಲು ಅವಕಾಶವಿದೆ. ನಿಮ್ಮ ವ್ಯಾಪ್ತಿಯ ಮತಗಟ್ಟೆಯಲ್ಲಿ ತಮ್ಮ ಆಧಾರ್ ಕಾರ್ಡ್ ಹಾಗೂ ರೇಷನ್ ಕಾರ್ಡ್‌ನೊಂದಿಗೆ ಮಾಹಿತಿ ನೀಡಬೇಕು. ಸರ್ಕಾರದ ಸೌಲಭ್ಯಗಳು ಪರಿಶಿಷ್ಟ ಜಾತಿಯ ಒಳಪಂಗಡಗಳಿಗೆ ಸಮಾನವಾಗಿ ತಲುಪಬೇಕು ಎನ್ನುವ ಹಿನ್ನೆಲೆಯಲ್ಲಿ ಈ ಸಮೀಕ್ಷೆ ಕೈಗೊಳ್ಳಲಾಗುತ್ತಿದ್ದು, ಇದೊಂದು ರಾಜ್ಯ ಸರ್ಕಾರದ ಮಹತ್ವದ ಹೆಜ್ಜೆಯಾಗಿದೆ ಎಂದರು.



ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ-2025 ಕುರಿತಂತೆ ಆನ್‌ಲೈನ್ ಮೂಲಕ ಸ್ವಯಂ ಘೋಷಣೆ https://schedulecastesurvey.karnataka.gov.in/selfdeclaration ವೆಬ್‌ಸೈಟ್ ವಿಳಾಸದಲ್ಲಿ ಮೇ 19ರಿಂದ 28ರವರೆಗೆ ಮರು ನಿಗದಿಪಡಿಸಲಾಗಿದೆ. ಈ ಕುರಿತು ನಗರಸಭೆ ಹಾಗೂ ಕಸ ವಿಲೇವಾರಿ ವಾಹನದ ಧ್ವನಿವರ್ಧಕದ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಮತ್ತು ಪೊಲೀಸ್ ಠಾಣೆಗಳಲ್ಲಿ ಈ ಕುರಿತು ಪ್ರಚಾರ ಕೈಗೊಳ್ಳಲು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚಿಸಿದರು.

ಇದೇ ಸಂದರ್ಭದಲ್ಲಿ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ-2025 ಕುರಿತ ಭಿತ್ತಿಪತ್ರವನ್ನು ಬಿಡುಗಡೆ ಮಾಡಲಾಯಿತು.

ಸಭೆಯಲ್ಲಿ ಗಣತಿದಾರರಿಗೆ ಸರಿಯಾಗಿ ಮಾಹಿತಿ ಇಂಧೀಕರಿಸುವ ಕುರಿತು ಇರುವ ಗೊಂದಲಗಳ ಬಗ್ಗೆ ಹಾಗೂ ಸಮೀಕ್ಷೆಗೆ ಒಳಪಡುವ ಕುಟುಂಬಗಳು ನೀಡುವ ಮಾಹಿತಿಯನ್ನು ಸರಿಯಾಗಿ ನಮೂದಿಸುವ ಕುರಿತು, ಬೇಡ ಜಂಗಮ ಪ್ರಮಾಣಪತ್ರ ಪಡೆಯದವರು ಸಮೀಕ್ಷಾ ಸಂದರ್ಭದಲ್ಲಿ ಜಾತಿ ನಮೂದಿಸುವ ಕುರಿತು ಇರುವ ಗೊಂದಲಗಳ ಬಗ್ಗೆ ಸಮಾಜದ ಮುಖಂಡರು ಸಭೆಯ ಗಮನಕ್ಕೆ ತಂದರು. ಒಟ್ಟಾರೆ ಸಮೀಕ್ಷೆ ಸರಿಯಾಗಿ ಆಗಬೇಕು ಎಂಬ ಒಕ್ಕೊರಲ ಬೇಡಿಕೆ ಸಮಾಜದ ಮುಖಂಡರಿಂದ ವ್ಯಕ್ತವಾಯಿತು. ಮಾದಿಗ, ಮಾದಾರ, ಆದಿ ಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ ಜಾತಿಗಳನ್ನು ನಮೂದಿಸುವ ಕುರಿತಂತೆಯೂ ಸಭೆಯಲ್ಲಿ ಸುದೀರ್ಘವಾಗಿ ಚರ್ಚೆ ನಡೆಯಿತು.

ಸಭೆಯಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಡಿವೈಎಸ್‌ಪಿ ಮಹಾಂತೇಶ ಸಜ್ಜನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟ್ಟೂರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಮುದಾಯದವರು ಪಾಲ್ಗೊಂಡಿದ್ದರು.

> ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಮಾತನಾಡಿ, ಮನೆ ಮನೆಯ ಭೇಟಿ ಸಂದರ್ಭದಲ್ಲಿ ತಮ್ಮ ಮಾಹಿತಿಯನ್ನು ನೀಡದವರು ನೇರವಾಗಿ ಆನ್‌ಲೈನ್ ಮೂಲಕ ಸ್ವಯಂ ಘೋಷಣೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ವಿವರಕ್ಕೆ ಸಹಾಯವಾಣಿ ಸಂಖ್ಯೆ 9481359000 ಸಂಪರ್ಕಿಸಬಹುದಾಗಿದೆ ಎಂದು ಸಭೆಗೆ ತಿಳಿಸಿದರು.

## ಗುಣಮಟ್ಟದ ಕಾಮಗಾರಿಗೆ ಆದ್ಯತೆ ನೀಡಿ



■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಗದಗ-ಬೆಟಗೇರಿ ಅವಳಿ ನಗರದ 4ನೇ ವಾರ್ಡಿನಲ್ಲಿ 23 ಲಕ್ಷ ರೂ ವೆಚ್ಚದ ಗಟಾರ ನಿರ್ಮಾಣ ಕಾಮಗಾರಿಗೆ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಸೋಮವಾರ ಭೂಮಿ ಪೂಜೆಯನ್ನು ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೃಷ್ಣಗೌಡ ಪಾಟೀಲ, ಪಾಲಾ ಬದಾಮಿ ರಸ್ತೆಯಲ್ಲಿ ಅಸಂಖ್ಯಾತ ವಾಹನಗಳು ಸಂಚರಿಸುತ್ತವೆ. ಜನ ಮತ್ತು ವಾಹನ ಸಂಚಾರಕ್ಕೆ ತೊಂದರೆ ಮಾಡದೇ ಕಾಮಗಾರಿ ತ್ವರಿತಗತಿಯಲ್ಲಿ ಸಾಗಲಿ. ಗುಣಮಟ್ಟದ ಕಾಮಗಾರಿಗೆ ಆದ್ಯತೆ ನೀಡುವಂತಾಗಲಿ ಎಂದರು.

4ನೇ ವಾರ್ಡ್‌ನ ನಗರಸಭಾ ಸದಸ್ಯೆ ಶಕುಂತಲಾ ಎಚ್.ಅಕ್ಕಿ ಮಾತನಾಡಿ, ಈ ಕಾಮಗಾರಿ ಹಲವು ವರ್ಷಗಳಿಂದ ನೆನೆಗುದಿಗೆ ಬಿದ್ದಿತ್ತು. ಈ ಬೇಡಿಕೆ ಬಗ್ಗೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರೊಂದಿಗೆ ಚರ್ಚಿಸಿದಾಗ ಲೋಕೋಪಯೋಗಿ ಇಲಾಖೆಯಿಂದ 23 ಲಕ್ಷ ರೂ ಅನುದಾನ ಬಿಡುಗಡೆಗೊಳಿಸಿ ಈ ಕಾಮಗಾರಿಗೆ ಚಾಲನೆ ನೀಡಿದ್ದಾರೆ. 4ನೇ ವಾರ್ಡಿನ ಸಮಸ್ತ ಜನತೆಯ ಪರವಾಗಿ ಸಚಿವರಿಗೆ ಅಭಿನಂದನೆಗಳು ಎಂದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಹೊಳೆಬಸಪ್ಪ ಅಕ್ಕಿ, ಲಕ್ಷ್ಮಣ ಭಜಂತ್ರಿ, ನಾಮ ನಿರ್ದೇಶಿತ ಸದಸ್ಯರಾದ ಮಹಮ್ಮದ ಹನೀಫ್ ಶಾಲಗಾರ, ನಗರಸಭಾ ಸದಸ್ಯೆ ಲಕ್ಷ್ಮವ್ವ ಮಾರುತಪ್ಪ ಭಜಂತ್ರಿ, ಹುಲ್ಲೇಶ ಭಜಂತ್ರಿ, ಆರ್. ಎಲ್. ಮೇಳಣ್ಣವರ, ಅಜ್ಜಣ್ಣ ಹುಗ್ಗೆನ್ನವರ, ಅಣ್ಣಪ್ಪ ಗಾರವಾಡ, ರಮೇಶ ಅರಮನಿ, ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ಗದಗ ಅಧ್ಯಕ್ಷ ಅಶೋಕ ಮಂದಾಲಿ, ಯೂಥ್ ಕಾಂಗ್ರೆಸ್ ಉಪಾಧ್ಯಕ್ಷ ಅನ್ವರ ನದಾಫ್, ಮುಸ್ತಾಕ ತಾವರಗೇರಿ, ಬಸವರಾಜ ಕುಂದಗೋಳ, ಎಸ್.ಟಿ. ದೇವರಕೊಂಡಿ, ರವಿ ಬಾವರೆ, ಮಂಜು ನೀಲಿ ಮುಂತಾದವರಿದ್ದರು.

### ಗದುಗಿನ ಎಸ್‌ಪಿ ಸಹಿತ ಮೂವರು ಪೊಲೀಸರಿಗೆ ಡಿಜಿ-ಐಜಿಪಿ ಪ್ರಶಂಸನಾ ಪದಕ

# ಹೆಮ್ಮೆ ಮೂಡಿಸಿದ ತ್ರಿಮೂರ್ತಿಗಳ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದಲ್ಲಿ ಪ್ರಥಮ ಬಾರಿಗೆ ಆರಂಭಿಸಲಾದ 2024-25ನೇ ಸಾಲಿನ 'ಡಿಜಿ ಮತ್ತು ಐಜಿಪಿ ಪ್ರಶಂಸನಾ ಪದಕ' ಪ್ರಶಸ್ತಿಗೆ ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೇರಿ ಜಿಲ್ಲೆಯ ಮೂವರು ಪೊಲೀಸರು ಭಾಜನರಾಗಿದ್ದಾರೆ.

ಕರ್ನಾಟಕ ರಾಜ್ಯದಲ್ಲಿ ಪ್ರಪ್ರಥಮ ಬಾರಿಗೆ ಪೊಲೀಸ್ ಇಲಾಖೆಯ ಸಾಧಕರಿಗೆ ಬೆನ್ನು ತಟ್ಟುವ ಕಾರ್ಯ ನಡೆಯುತ್ತಿದೆ. ಮೊದಲ ಬಾರಿಗೆ ರಾಜ್ಯದ 200 ಪೊಲೀಸ್ ಅಧಿಕಾರಿಗಳನ್ನು ಆಯ್ಕೆ ಮಾಡಲಾಗಿದ್ದು, ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೇರಿದಂತೆ ಮೂವರು ಪೊಲೀಸರಿಗೆ ಈ ಪುರಸ್ಕಾರ ಘೋಷಣೆಯಾಗಿದೆ. ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಮುಳಗುಂದ ಪೊಲೀಸ್ ಠಾಣೆಯ ಇನ್ಸಪೆಕ್ಟರ್ ಸಂಗಮೇಶ ಶಿವಯೋಗಿ ಮತ್ತು ಮುಂಡರಗಿ ಠಾಣೆಯ ಕಾನ್ಸ್‌ಟೇಬಲ್ ಜಾಫರ್ ಬಚ್ಚೇರಿ ಅವರು ಈ ಪ್ರಶಸ್ತಿಗೆ ಭಾಜನರಾಗಿದ್ದಾರೆ.



**ಎಸ್ಪಿ ಬಿ.ಎಸ್. ನೇಮಗೌಡ:** ಜಿಲ್ಲಾ ಎಸ್‌ಪಿ ಬಿ.ಎಸ್. ನೇಮಗೌಡ ಅವರು ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ, ಪೊಲೀಸರ ಮನೋಬಲ ಹೆಚ್ಚಿಸುವಲ್ಲಿ, ಕಟ್ಟುನಿಟ್ಟಿನ ಸಾರಿಗೆ ನಿಯಮ ಪಾಲನೆ, 'ಥರ್ಡ್ ಐ'ನಂಥಹ ವಿಶಿಷ್ಟ ಯೋಜನೆ, ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಸಾರ್ವಜನಿಕರಿಗೆ ಅನೂಕೂಲಕರ ವಾತಾವರಣ ನಿರ್ಮಿಸಿ, ಸಾರ್ವಜನಿಕರ ನಂಬಿಕೆ ಗಳಿಸುವಲ್ಲಿ ನಿರಂತರ ಪ್ರಯತ್ನ ಕೈಗೊಂಡಿದ್ದಾರೆ. ಅಧಿಕಾರದ ನಿಷ್ಠೆ ಮತ್ತು ಸಮಾಜದ ಒಳಿತಿಗಾಗಿ ಅವರ ಸೇವೆ ಶ್ಲಾಘನೀಯವಾಗಿದೆ.

**ಇನ್ಸ್‌ಪೆಕ್ಟರ್ ಸಂಗಮೇಶ ಶಿವಯೋಗಿ:** ಮುಳಗುಂದ ಠಾಣೆಯ ಇನ್ಸ್‌ಪೆಕ್ಟರ್ ಸಂಗಮೇಶ ಶಿವಯೋಗಿ ಅವರು ಗ್ರಾಮೀಣ ಪ್ರದೇಶದಲ್ಲಿ ಕಾನೂನು ಹಾಗೂ ಶಾಂತಿ ಕಾಪಾಡುವಲ್ಲಿ ನಿರಂತರ ಶ್ರಮವಹಿಸಿದ್ದಾರೆ. ಗದಗ ನಗರದಲ್ಲೂ ಅವರು ಕರ್ತವ್ಯ ನಿರ್ವಹಿಸಿ ಇಲಾಖೆಗೆ ಸವಾಲಾಗಿದ್ದ ಅಪರಾಧಿಗಳನ್ನು ಪತ್ತೆ ಹಚ್ಚುವಲ್ಲಿ ಮೊದಲ ಸ್ಥಾನದಲ್ಲಿದ್ದು, ತಂತ್ರಜ್ಞಾನದ ಜ್ಞಾನ ಹಾಗೂ ಪರಿಣಾಮಕಾರಿ ನಿರ್ವಹಣೆ, ಸಾರ್ವಜನಿಕರ ಜೊತೆಗಿನ ಜನಸ್ನೇಹಿ ಆಡಳಿತ ಎಲ್ಲರ ಮೆಚ್ಚುಗೆಗೆ ಕಾರಣವಾಗಿದೆ.

**ಕಾನ್ಸ್‌ಟೇಬಲ್ ಜಾಫರ್ ಬಚ್ಚೇರಿ:** ಮುಂಡರಗಿ ಪೊಲೀಸ್ ಠಾಣೆಯ ಕಾನ್ಸ್‌ಟೇಬಲ್ ಜಾಫರ್ ಬಚ್ಚೇರಿ ಅವರು ತಮ್ಮ ಕರ್ತವ್ಯನಿಷ್ಠೆ, ಜನಸ್ನೇಹಿ ನಡವಳಿಕೆ ಮತ್ತು ಅಪರಾಧ ಪತ್ತೆ ಕಾರ್ಯಗಳಲ್ಲಿ ತೋರಿದ ತೀವ್ರತೆಗಾಗಿ ರಾಜ್ಯ ಮಟ್ಟದ ಮಾನ್ಯತೆಯನ್ನು ಪಡೆದಿದ್ದಾರೆ. ಅವರು ಮುಂಡರಗಿಯ ಜನತೆಯ ನಿಕಟ ಬಂಧುವಾಗಿದ್ದು, ಸಾರ್ವಜನಿಕರಲ್ಲಿ ಪೊಲೀಸ್ ಇಲಾಖೆಯ ಮೇಲಿನ ವಿಶ್ವಾಸ ಹೆಚ್ಚುವಂತೆ ಮಾಡಿದ್ದಾರೆ.

**ಪ್ರಶಸ್ತಿ ವಿತರಣಾ ಸಮಾರಂಭ ನಾಳೆ**

ಈ ಶ್ರೇಷ್ಠ ಸಾಧಕರಿಗೆ ಮೇ 21ರಂದು ಡಿಜಿಪಿ ಕಮಾಂಡೇಷನ್ ಡಿಸ್ಕ್ ಪರೇಡ್‌ನಲ್ಲಿ ಪ್ರಶಸ್ತಿ ವಿತರಣೆ ನಡೆಯಲಿದೆ. ಈ ಸಮಾರಂಭವನ್ನು ಡಿಜಿಪಿ ಅಲೋಕ್ ಮೋಹನ್ ಅವರು ನೇರವಾಗಿ ನಿರ್ವಹಿಸಲಿದ್ದು, ಇದು ಅವರ ನಿವೃತ್ತಿಗೆ ಮುನ್ನದ ಕೊನೆಯ ಅಧಿಕೃತ ಪರೇಡ್ ಆಗಿರುವುದು ವಿಶೇಷವಾಗಿದೆ.

**ಅಭಿನಂದನೆಗಳ ಮಹಾಪೂರ**

ಈ ತ್ರಿಮೂರ್ತಿಗಳ ಸಾಧನೆಗೆ ಜಿಲ್ಲೆಯಾದ್ಯಂತ ಮೆಚ್ಚುಗೆ ವ್ಯಕ್ತವಾಗಿದೆ. ಪೊಲೀಸ್ ಇಲಾಖೆಯ ಇತರ ಸಿಬ್ಬಂದಿ, ಸಾರ್ವಜನಿಕರು ಹಾಗೂ ಸ್ನೇಹಿತರು ಸಾಮಾಜಿಕ ಜಾಲತಾಣಗಳಲ್ಲಿ ಹಾಗೂ ನೇರವಾಗಿ ಅಭಿನಂದನೆ ಸಲ್ಲಿಸುತ್ತಿದ್ದಾರೆ. ಇವರು ಸಕಾಲದಲ್ಲಿ ಮಾಡಿದ ಸತ್ಯ ಸೇವೆಗೆ ದೊರೆತ ಪ್ರಾಮಾಣಿಕ ಗೌರವ ಇದಾಗಿದೆ. ಇಂತಹ ಸೇವೆಗಳಿಗೆ ಪದಕ ರೂಪದಲ್ಲಿ ಸ್ಮರಣೆ ಸಿಗುವುದು ಮುಂದೆ ಕೆಲಸ ಮಾಡುವವರಿಗೆ ಪ್ರೇರಣೆಯಾಗಲಿದೆ ಎಂದು ಹಿರಿಯರು ಅಭಿಪ್ರಾಯಪಟ್ಟಿದ್ದಾರೆ.

# ಹೆಣ್ಣು ಮಗುವಿಗೆ ಜನನ: ನಟಿ ಸಂಜನಾ ಗಲ್ರಾನಿ ಮನೆಯಲ್ಲಿ ಸಂಭ್ರಮ!



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬಹುಭಾಷಾ ನಟಿ ಸಂಜನಾ ಗಲ್ರಾನಿ ಅವರು ಹೆಣ್ಣು ಮಗುವಿಗೆ ಜನ್ಮ ನೀಡಿದ್ದು, ಅವರ ಮನೆಯಲ್ಲಿ ಸಂಭ್ರಮ ಮನೆ ಮಾಡಿದೆ. ಅಲ್ಲದೇ ತಾಯಿ ಹಾಗೂ ಮಗು ಇಬ್ಬರು ಆರೋಗ್ಯವಾಗಿದ್ದಾರೆ.

ಇತ್ತೀಚೆಗೆ ವಿಶೇಷವಾಗಿ ಬೇಬಿ ಬಂಪ್ ಫೋಟೋಶೂಟ್ ಮಾಡಿಸಿ ತಾವು ಎರಡನೇ ಮಗುವಿನ ನಿರೀಕ್ಷೆಯಲ್ಲಿರುವ ವಿಚಾರವನ್ನು ನಟಿ ಹಂಚಿಕೊಂಡಿದ್ದರು. ಲಾಕ್‌ಡೌನ್ ಸಮಯದಲ್ಲಿ ಡಾ. ಅಜೀಜ್ ಪಾಷಾ ಅವರನ್ನ ಪ್ರೀತಿಸಿ ವಿವಾಹವಾಗಿದ್ದರು. 2022ರ ಮೇ ತಿಂಗಳಲ್ಲಿ ಸಂಜನಾ ಗಲ್ರಾನಿ ತಮ್ಮ ಮೊದಲ ಮಗುವಿಗೆ ಜನ್ಮ ನೀಡಿದ್ದರು. ಅಜೀಜ್ ಪಾಷಾ ಮತ್ತು ಸಂಜನಾ ದಂಪತಿಗೆ 'ಅಲಾರಿಕ್' ಹೆಸರಿನ ಮಗನಿದ್ದಾನೆ. ಇದೀಗ ಹೆಣ್ಣು ಮಗು ಜನನ ಆಗಿದ್ದು, ಮನೆಯಲ್ಲಿ ಸಂಭ್ರಮ ಮನೆ ಮಾಡಿದೆ.

# ಆಂಧ್ರದ ಕಡೆ ಪ್ರವಾಸಕ್ಕೆ ತೆರಳಿದ್ದ ತುಮಕೂರಿನ ಮೂವರು ದುರ್ಮರಣ: ಹಲವರಿಗೆ ಗಾಯ!

■ವಿಜಯಸಾಕ್ಷಿ ಸುದ್ದಿ, ತುಮಕೂರು

ಆಂಧ್ರದ ಕಡೆ ಪ್ರವಾಸಕ್ಕೆ ತೆರಳಿದ್ದ ತುಮಕೂರಿನ ಮೂವರು ದುರ್ಮರಣ ಹೊಂದಿರುವ ಘಟನೆ ಆಂಧ್ರದ ಕರ್ನೂಲ್ ಬಳಿ ನಡೆದಿದೆ. ನವೀನ್(48), ಸಂತೋಷ್(35), ಲೋಕೇಶ್ (38) ಮೃತ ದುರ್ದೈವಿಗಳು. ಇವರು ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲೂಕಿನ ಕೆಂಕೆರೆ ನಿವಾಸಿಗಳು ಎನ್ನಲಾಗಿದೆ.

ನವೀನ್, ಸಂತೋಷ್, ಲೋಕೇಶ್ ಸೇರಿ ಒಟ್ಟು 6 ಮಂದಿ ಆಂಧ್ರಪ್ರದೇಶದ ಕಡೆಗೆ ಪ್ರವಾಸಕ್ಕೆ ತೆರಳಿದ್ದರು. ಈ ವೇಳೆ ಕಾರು ಕರ್ನೂಲ್ ರಸ್ತೆ ವಿಭಜಕಕ್ಕೆ ಡಿಕ್ಕಿಯಾಗಿದೆ. ಅಪಘಾತದ ರಭಸಕ್ಕೆ ಕಾರಿನಲ್ಲಿದ್ದ ನವೀನ್, ಸಂತೋಷ್ ಹಾಗೂ ಲೋಕೇಶ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಇನ್ನುಳಿದ ಮೂವರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ.

### ಗದಗ ಜಿಲ್ಲೆಯಲ್ಲಿ ಶಕ್ತಿ ಯೋಜನೆಯಡಿ 9.33 ಕೋಟಿ ಮಹಿಳೆಯರ ಉಚಿತ ಪ್ರಯಾಣ

# ಮಹಿಳೆಯರ ಸುಸ್ಥಿರ ಬದುಕಿಗೆ 'ಶಕ್ತಿ'ಯೇ ಆಸರೆ




ಸ್ತ್ರೀಯರಲ್ಲಿ ಆತ್ಮವಿಶ್ವಾಸ ಬೆಳೆಸಿ, ಆರ್ಥಿಕ ಸ್ವಾವಲಂಬನೆಗೆ ಮಾರ್ಗ ತೋರಿಸುವಲ್ಲಿ ಕರ್ನಾಟಕ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ 'ಶಕ್ತಿ ಯೋಜನೆ' ಒಂದು ಕ್ರಾಂತಿಕಾರಿ ಹೆಜ್ಜೆಯಾಗಿದೆ. ಮಹಿಳಾ ಸಬಲೀಕರಣದ ನವದಿಗಂತವನ್ನು ಪರಿಚಯಿಸುತ್ತಿರುವ ಈ ಯೋಜನೆ, ನಾಡಿನ ಮಹಿಳೆಯರ ಜೀವನ ವಿಧಾನದಲ್ಲಿ ಸ್ಥಿರ ಬದಲಾವಣೆಗೆ ಕಾರಣವಾಗುತ್ತಿದೆ.

ರಾಜ್ಯದ ಮಹಿಳೆಯರ ಸಬಲೀಕರಣದ ಉದ್ದೇಶದಿಂದ ಜಾರಿಗೆ ತಂದ ಶಕ್ತಿ ಯೋಜನೆಯಡಿ, ಮಹಿಳೆಯರು, ವಿದ್ಯಾರ್ಥಿನಿಯರು ಮತ್ತು ಲಿಂಗತ್ವ ಅಲ್ಪ ಸಂಖ್ಯಾತರು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನಗರ ಸಾರಿಗೆ, ಸಾಮಾನ್ಯ ಮತ್ತು ವೇಗದೂತ ಬಸ್‌ಗಳಲ್ಲಿ ರಾಜ್ಯಾದ್ಯಂತ ಉಚಿತವಾಗಿ ಪ್ರಯಾಣಿಸುತ್ತಿದ್ದು, ಈ ಯೋಜನೆಯಡಿ ಗದಗ ಜಿಲ್ಲೆಯಲ್ಲಿ ಮಾರ್ಚ್ 2025ರ ಅಂತ್ಯದವರೆಗೆ 9.33 ಕೋಟಿ ಮಹಿಳೆಯರು ಉಚಿತ ಪ್ರಯಾಣದ ಪ್ರಯೋಜನ ಪಡೆದಿದ್ದಾರೆ.

ಗದಗ ಜಿಲ್ಲೆಯಲ್ಲಿ ಒಟ್ಟು ಏಳು ತಾಲೂಕುಗಳಿದ್ದು, ತಾಲೂಕುವಾರು ಮಹಿಳೆಯರು ಪ್ರಯಾಣಿಸಿದ ವಿವರ ಹಾಗೂ ಉಚಿತ ಟಿಕೆಟ್ ವಿತರಣೆ ಮೊತ್ತ ಹೀಗಿದೆ: ಗದಗ ತಾಲೂಕಿನಲ್ಲಿ 27276281 ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದು, ರೂ. 873194608ಗಳ ಶೂನ್ಯ ಮೊತ್ತದ ಟಿಕೆಟ್ ವಿತರಣೆ ಮಾಡಲಾಗಿದೆ. ರೋಣದಲ್ಲಿ 14110356, ರೂ.432692225ಗಳ ಮೊತ್ತದ ಶೂನ್ಯ ಟಿಕೆಟ್ ವಿತರಣೆಯಾಗಿದೆ. ಲಕ್ಷ್ಮೇಶ್ವರದಲ್ಲಿ 1,29,37,071, ರೂ. 36,16,07,713 ಮೊತ್ತದ ಶೂನ್ಯ ಟಿಕೆಟ್ ವಿತರಣೆಯಾಗಿದೆ. ನರಗುಂದ ತಾಲೂಕಿನಲ್ಲಿ ರೂ.42,89,47,797ಗಳ ಟಿಕೆಟ್ ವಿತರಿಸಲಾಗಿದೆ. ಮುಂಡರಗಿ ತಾಲೂಕಿನಲ್ಲಿ ರೂ. 3,76,59,861 ಶೂನ್ಯ ಟಿಕೆಟ್, ಗಜೇಂದ್ರಗಡ ತಾಲೂಕಿನಲ್ಲಿ ರೂ. 37,98,94,207 ಮೊತ್ತದ ಶೂನ್ಯ ಟಿಕೆಟ್, ಶಿರಹಟ್ಟಿ ತಾಲೂಕಿನಲ್ಲಿ ರೂ. 11,40,48,862 ಮೊತ್ತದ ಶೂನ್ಯ ಟಿಕೆಟ್ ವಿತರಣೆ ಮಾಡಲಾಗಿದೆ.

ಜಿಲ್ಲೆಯಲ್ಲಿ ಒಟ್ಟಾರೆ 9,32,75,327 ಮಹಿಳಾ ಪ್ರಯಾಣಿಕರು ಮಾರ್ಚ್ ಅಂತ್ಯದವರೆಗೆ ಪ್ರಯಾಣ ಮಾಡುವ ಮೂಲಕ ರೂ.296,69,84,274ಗಳ ಮೊತ್ತದ ಶೂನ್ಯ ಟಿಕೆಟ್ ಪಡೆದು ಪ್ರಯಾಣಿಸಿ, ದಾಖಲೆಯ ಪ್ರಯಾಣ ಮಾಡಿದ್ದಾರೆ. ಇದು ರಾಜ್ಯ ಸರ್ಕಾರದ ಶಕ್ತಿ ಯೋಜನೆಯಿಂದ ಸಾಧ್ಯವಾಗಿದೆ ಎಂದು ಮಹಿಳೆಯರು ಸರ್ಕಾರವನ್ನು ಪ್ರಶಂಸಿಸಿದ್ದಾರೆ.

ಶಕ್ತಿ ಯೋಜನೆಯ ಮೂಲಕ ಮಹಿಳೆಯರು ದೂರದ ಪಟ್ಟಣಗಳಿಗೆ ತೆರಳಿ ಹೆಚ್ಚಿನ ಆದಾಯದ ಉದ್ಯೋಗ ಹೊಂದಲು ಸಹಕಾರಿಯಾಗಿರುವುದು ಮಾತ್ರವಲ್ಲದೇ ಹೆಚ್ಚಿನ ಶಿಕ್ಷಣ ಮತ್ತು ಉನ್ನತ ಶಿಕ್ಷಣ ಪಡೆಯುವ ವಿದ್ಯಾರ್ಥಿನಿಯರಿಗೆ ತಮ್ಮ ಭವಿಷ್ಯದ ಕನಸುಗಳನ್ನು ನನಸು ಮಾಡಿಕೊಳ್ಳುವ ಸುವರ್ಣಾವಕಾಶವಾಗಿದೆ. ಅಲ್ಲದೇ ಮಹಿಳೆಯರು ಉದ್ಯೋಗ, ಪ್ರವಾಸ ಮತ್ತಿತರ ಚಟುವಟಿಕೆಗಳನ್ನು ಕೈಗೊಳ್ಳುವುದಕ್ಕೆ ಅನುಕೂಲವಾಗಿರುವುದರ ಜೊತೆಗೆ ಈ ಪ್ರಯಾಣ ವೆಚ್ಚದ ಉಳಿತಾಯದ ಮೊತ್ತವು ದೈನಂದಿನ ಬದುಕಿನಲ್ಲಿನ ಹಲವು ಅವಶ್ಯಕತೆಗಳನ್ನು ಪೂರೈಸಲು ನೆರವಾಗಿದೆ.

ಶಕ್ತಿ ಯೋಜನೆಯಿಂದ ನಾಡಿನ ಮಹಿಳೆಯರಿಗೆ ದೂರದ ಪ್ರದೇಶಗಳಿಗೆ ತೆರಳುವ, ಪ್ರವಾಸ ಮಾಡುವ ಕನಸುಗಳು ನನಸಾಗಿವೆ. ಶಕ್ತಿ ಯೋಜನೆ ಪ್ರವಾಸಕ್ಕೆ ಅವಕಾಶ ಲಭ್ಯವಾಗಿದೆ. ಇದರಿಂದ ರಾಜ್ಯದ ಪ್ರವಾಸೋದ್ಯಮಕ್ಕೂ ಸಹ ಅಪಾರ ಪ್ರಮಾಣದಲ್ಲಿ ಸಹಕಾರಿಯಾಗಿದೆ. ಜೊತೆಗೆ ಮಹಿಳೆಯರ ಸುಸ್ಥಿರ ಬದುಕಿಗೆ ಶಕ್ತಿಯೇ ಆಸರೆಯಾಗಿದೆ ಎನ್ನುತ್ತಾರೆ ಪ್ರವಾಸೋದ್ಯಮ ಸಚಿವರಾದ ಡಾ. ಎಚ್.ಕೆ. ಪಾಟೀಲ.

ಶಕ್ತಿ ಯೋಜನೆ ಕರ್ನಾಟಕದ ಮಹಿಳೆಯರಿಗೆ ಕೇವಲ ಆರ್ಥಿಕ ನೆರವನ್ನಷ್ಟೇ ನೀಡದೆ, ಜೀವನವನ್ನು ರೂಪಿಸಿಕೊಳ್ಳುವ ಶಕ್ತಿ, ಆತ್ಮವಿಶ್ವಾಸ ಮತ್ತು ಅವಕಾಶಗಳ ದಾರಿ ಒದಗಿಸುತ್ತಿದೆ. ಈ ಯೋಜನೆಯ ಪರಿಣಾಮವಾಗಿ ಸಾವಿರಾರು ಮಹಿಳೆಯರು ತಮ್ಮ ಕುಟುಂಬಗಳನ್ನೂ, ಸಮಾಜವನ್ನೂ ಬದಲಾಯಿಸುವ ಶಕ್ತಿ ಕೇಂದ್ರಗಳಾಗಿ ರೂಪಗೊಳ್ಳುತ್ತಿದ್ದಾರೆ. ನಿಜ ಅರ್ಥದಲ್ಲಿ ಶಕ್ತಿ ಯೋಜನೆ, ನಾಡು ಮುಂದುವರಿಯುವ ಮಾರ್ಗದಲ್ಲಿ ಮಹಿಳೆಯರ ಶಕ್ತಿಯ ಅವಿಭಾಜ್ಯ ಪಾತ್ರವನ್ನು ಪ್ರಭಾವಶೀಲವಾಗಿ ಮೂಡಿಬರುತ್ತಿದೆ.

**ಫಲಾನುಭವಿಗಳು ಏನಂತಾರೆ?**

ಶಕ್ತಿ ಯೋಜನೆ ಜಾರಿಯಿಂದಾಗಿ ರಾಜ್ಯದ ವಿವಿಧ ಧಾರ್ಮಿಕ ಕ್ಷೇತ್ರಗಳಿಗೆ ಕುಟುಂಬ ಸಮೇತರಾಗಿ ಪ್ರಯಾಣಿಸಲು ತುಂಬಾ ಅನುಕೂಲವಾಗಿದೆ. ಅನೇಕ ವರ್ಷಗಳಿಂದ ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಆಸೆ ಇತ್ತು. ಆದರೆ ಹಣಕಾಸಿನ ತೊಂದರೆಯಿಂದ ಇದು ಸಾಧ್ಯವಾಗುತ್ತಿರಲಿಲ್ಲ. ಇದೀಗ ಶಕ್ತಿ ಯೋಜನೆ ಜಾರಿಯಿಂದಾಗಿ ವಿವಿಧ ಸ್ಥಳಗಳಿಗೆ ಕುಟುಂಬ ಸಮೇತ ಭೇಟಿ ಕೊಡಲು ಅನುಕೂಲವಾಗಿದೆ. ಇದಲ್ಲದೆ, ಇತರೆ ಕೆಲಸಗಳಿಗೆ ಬಸ್‌ನಲ್ಲಿ ಸಂಚರಿಸುವ ಬಡ ಮಹಿಳೆಯರಿಗೆ ಇದು ಉಪಯೋಗವಾಗಿದೆ. ಶಕ್ತಿ ಯೋಜನೆ ಜಾರಿಗೊಳಿಸಿದ್ದಕ್ಕಾಗಿ ಸರ್ಕಾರಕ್ಕೆ ಅಭಿನಂದನೆಗಳು.

– ನೀಲವ್ವ ಭಾವಿಮನಿ, ಮುಂಡರಗಿ.



ಅನೇಕ ವರ್ಷಗಳಿಂದ ರಾಜ್ಯದ ವಿವಿಧ ಪ್ರವಾಸಿ ತಾಣ, ಕ್ಷೇತ್ರಗಳಿಗೆ ಭೇಟಿ ನೀಡುವ ಆಸೆಯಿತ್ತು. ಹಣಕಾಸಿನ ತೊಂದರೆಯಿಂದಾಗಿ ಸಾಧ್ಯವಾಗಲಿಲ್ಲ. ಶಕ್ತಿ ಯೋಜನೆಯಿಂದಾಗಿ ಬಡ ಹಾಗೂ ಮಧ್ಯಮ ವರ್ಗದ ಮಹಿಳೆಯರು ರಾಜ್ಯದಾದ್ಯಂತ ಸಂಚರಿಸಿದ್ದಾರೆ. ಜೊತೆಗೆ ಸಂಭಂದಿಕರ ಮನೆಗಳಿಗೆ ಭೇಟಿ ನೀಡಲು ತುಂಬಾ ಅನುಕೂಲವಾಗಿದೆ. ನಾಡಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಧನ್ಯವಾದಗಳು.

– ಲಕ್ಷ್ಮೀ ಬೆಟಗೇರಿ, ಗದಗ.

### ಪ್ರಧಾನಮಂತ್ರಿ ಫಸಲ್ ಭಿಮಾ ಯೋಜನೆಯಲ್ಲಿ ಅವ್ಯವಹಾರ | ಲೋಕಾಯುಕ್ತ ತನಿಖೆಗೆ ಆಗ್ರಹ

# ವಿಮೆ ಹಣ ಏಜೆಂಟರ ಪಾಲು




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯದಲ್ಲಿ ಪ್ರಧಾನಮಂತ್ರಿ ಫಸಲ್ ಭಿಮಾ ಯೋಜನೆಯಲ್ಲಿ ಏಜೆಂಟರ ಹಾವಳಿ ತಡೆಗಟ್ಟಬೇಕು ಮತ್ತು ಯೋಜನೆಯಲ್ಲಿ ಆಗುತ್ತಿರುವ ಅವ್ಯವಹಾರವನ್ನು ಲೋಕಾಯುಕ್ತ ತನಿಖೆಗೆ ಒಳಪಡಿಸಬೇಕು ಎಂದು ಆಗ್ರಹಿಸಿ ಸೋಮವಾರ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ಜಿಲ್ಲಾಧ್ಯಕ್ಷ ಶರಣು ಗೋಡಿ ಹಾಗೂ ತಾಲೂಕಾಧ್ಯಕ್ಷ ನಾಗೇಶ ಅಮರಾಪುರ ನೇತೃತ್ವದಲ್ಲಿ ಲಕ್ಷ್ಮೇಶ್ವರದ ತಹಸೀಲ್ದಾರರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಅರ್ಪಿಸಿದರು.

ಈ ವೇಳೆ ಮಾತನಾಡಿದ ಶರಣು ಗೋಡಿ ಮತ್ತು ನಾಗೇಶ ಅಮರಾಪೂರ, ಪ್ರಧಾನ ಮಂತ್ರಿ ಫಸಲ್ ಭಿಮಾ ಯೋಜನೆಯಲ್ಲಿ ಏಜೆಂಟರ ಹಾವಳಿ ಹೆಚ್ಚಾಗಿದ್ದು, ಬೆಳೆ ವಿಮೆ ನಿಜವಾದ ರೈತರಿಗೆ ಸಂಪೂರ್ಣವಾಗಿ ತಲುಪುತ್ತಿಲ್ಲ. ರಾಜ್ಯದಲ್ಲಿ ಅತಿವೃಷ್ಟಿ, ನೆರೆಹಾವಳಿಯಿಂದ ವ್ಯಾಪಕ ಬೆಳೆ ನಷ್ಟವಾಗಿದ್ದು, ಇಂತಹ ಸಂಕಷ್ಟದ ಕಾಲದಲ್ಲಿ ಬೆಳೆ ವಿಮೆ ರೈತರಿಗೆ ಆಸರೆಯಾಗಬೇಕಾಗಿತ್ತು. ಆದರೆ ಬಂಜರು ಭೂಮಿಗೆ ಫಸಲ್ ಭಿಮಾ ಯೋಜನೆ ಜಾರಿಯಾಗುತ್ತಿದ್ದು, ಏಜೆಂಟರ ಹಾವಳಿಯಿಂದ ನಿಜವಾದ ರೈತರಿಗೆ ಬೆಳೆ ವಿಮೆ ದೊರೆಯುತ್ತಿಲ್ಲ ಎಂದು ಆರೋಪಿಸಿದರು.

ಬ್ಯಾಂಕಿಗೆ ಹೋಗಿ ಬೆಳೆ ವಿಮೆ ತುಂಬಿದ ರೈತರಿಗೆ ಬೆಳೆ ವಿಮೆ ಪರಿಹಾರ ದೊರೆಯುತ್ತಿಲ್ಲ. ಆದರೆ ಶೇ 50–50 ಮಾತನಾಡಿಕೊಂಡು, ಏಜೆಂಟರ ಮೂಲಕ ತುಂಬಿದ ವಿಮಾ ಪ್ರಿಮಿಯಮ್‌ಗೆ ಪರಿಹಾರ ದೊರಕುತ್ತಿದೆ.

ಅದರಲ್ಲೂ ಬಂಜರು ಭೂಮಿ ಇದ್ದವರು ಇದರ ಲಾಭ ಪಡೆದುಕೊಳ್ಳುತ್ತಿದ್ದು ದೊಡ್ಡ ಪ್ರಮಾಣದಲ್ಲಿ ಅವ್ಯವಹಾರ ನಡೆಯುತ್ತಿದೆ. ಇಂತಹ ಅಧಿಕಾರಿಗಳ ವಿರುದ್ಧ ಲೋಕಾಯುಕ್ತ ತನಿಖೆ ನಡೆಸಬೇಕೆಂದು ಆಗ್ರಹಿಸಿದರು.

ತಹಸೀಲ್ದಾರ ವಾಸುದೇವ ಸ್ವಾಮಿ ಮನವಿ ಸ್ವೀಕರಿಸಿ ಜಿಲ್ಲಾಧಿಕಾರಿಗಳಿಗೆ ತಲುಪಿಸುವದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಕರವೇ ಸ್ವಾಭಿಮಾನಿ ಸೇನೆ ಜಿಲ್ಲಾ ಕಾರ್ಯಾಧ್ಯಕ್ಷ ಇಸ್ಮಾಯಿಲ್ ಆಡೂರ, ಯಲ್ಲಪ್ಪ ಹಂಜಗಿ, ಕೈಸರ ಅಹ್ಮದಅಲಿ, ಆಸೀಫ್ ಯಳಿವಾರ, ಮುತ್ತಣ್ಣ ಗಡೆಪ್ಪನವರ, ಗೌಸ ಜಮಖಂಡಿ, ಜುಬೇರ್ ಮುಲ್ಲಾ, ಗೌಸ್ ಸವಣೂರ, ಶರಣಪ್ಪ ಬಸಾಪುರ, ಪೀರಸಾಬ್ ರಿತ್ತಿ, ತನ್ವೀರ್ ರಿತ್ತಿ, ಮಾರುತಿ ಭಜಂತ್ರಿ, ಬಸವರಾಜ್ ಅಮರಾಪುರ್, ಅಯ್ಯಪ್ಪ ಪಾಟೀಲ್, ಮುಕ್ತಾರ ಜಮಖಂಡಿ, ನಾಸಿರ್ ಸಿದ್ದಿ, ನದಿಮ್ ಸೇರಿದಂತೆ ಅನೇಕರು ಇದ್ದರು.

# ರೈತ ಬಾಂಧವರಿಗೆ ಮುಂಗಾರು ಚಟುವಟಿಕೆಗಳ ಸಲಹೆ

■ವಿಜಯಸಾಕ್ಷಿ ಸುದ್ದಿ, ಗದಗ

ಪೂರ್ವ ಮುಂಗಾರಿನಲ್ಲಿ ಗದಗ ಜಿಲ್ಲೆಯ ಎಲ್ಲೆಡೆ ವರುಣನ ಕೃಪೆಯಾಗಿದ್ದು, 1ನೇ ಮಾರ್ಚ್ 2025ರಿಂದ ಮೇ. 17 2025ರವರೆಗೆ ಸರಾಸರಿ 68 ಮಿ.ಮೀ ವಾಡಿಕೆ ಮಳೆಗೆ 102ಮಿ.ಮೀ.ಯಷ್ಟು ಮಳೆಯಾಗಿದೆ. ಜಿಲ್ಲೆಯಲ್ಲಿ ಮುಂಗಾರು ಹಂಗಾಮಿಗೆ ಮೆಕ್ಕೆ ಜೋಳ 1.15ಲಕ್ಷ ಹೆ., 1.33 ಲಕ್ಷ ಹೆ. ಹೆಸರು, 21000 ಹೆ. ಶೇಂಗಾ, 7500 ಹೆ. ಸೂರ್ಯಕಾಂತಿ, ಹಾಗೂ 17000 ಹೆ. ಹತ್ತಿ ಸೇರಿದಂತೆ ಒಟ್ಟು 3.06ಲಕ್ಷ ಹೆ. ಪ್ರದೇಶದಲ್ಲಿ ಬಿತ್ತನೆ ಕ್ಷೇತ್ರದ ಗುರಿಯಿದೆ.

2025–26ರ ಮುಂಗಾರು ಹಂಗಾಮಿಗೆ ಹೆಸರು, ಮು.ಜೋಳ, ಶೇಂಗಾ, ಹೈ.ಹತ್ತಿ ಸೇರಿದಂತೆ ವಿವಿಧ ಬೆಳೆಗಳ 6000 ಕ್ವಿಂ ಬಿತ್ತನೆ ಬೀಜದ ಅವಶ್ಯಕತೆ ಇದ್ದು, ಜಿಲ್ಲೆಯ ಎಲ್ಲ ತಾಲ್ಲೂಕುಗಳ ರೈತ ಸಂಪರ್ಕ ಕೇಂದ್ರಗಳಲ್ಲಿ ಸಹಾಯಧನದಲ್ಲಿ ವಿತರಿಸಲು ವ್ಯವಸ್ಥೆ ಮಾಡಿಕೊಳ್ಳಲಾಗಿದೆ. 26.05.2025ರಿಂದ ವಿತರಣೆ ಪ್ರಾರಂಭಿಸಲು ಯೋಜಿಸಲಾಗಿದೆ.

ಜಿಲ್ಲೆಯಲ್ಲಿ ಮುಂಗಾರು ಹಂಗಾಮಿಗೆ 59205 ಮೆ. ಟನ್‌ಗಳಷ್ಟು ವಿವಿಧ ರಸಗೊಬ್ಬರಗಳ ಬೇಡಿಕೆ ಇದ್ದು, 13582 ದಾಸ್ತಾನು ಇದೆ. ಹಂಗಾಮಿನಲ್ಲಿ ರಸಗೊಬ್ಬರ ಕೊರತೆಯಾಗಂತೆ ವಿವಿಧ ರಸಗೊಬ್ಬರ ಸರಬರಾಜು ಸಂಸ್ಥೆಗಳೊಂದಿಗೆ ಸಂಪರ್ಕಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.

ರೈತರು ಬಿತ್ತನೆ ಬೀಜಗಳನ್ನು ಖರೀದಿಸುವಾಗ ಅಧಿಕೃತ ಮಾರಾಟಗಾರರಿಂದ, ರಸೀದಿ ಪಡೆದು ಖರೀದಿಸಲು ತಿಳಿಸಿದೆ. ಬಿಡಿ ಬೀಜ ಮಾರಾಟಗಾರರಿಂದ ಬಿತ್ತನೆ ಬೀಜಗಳನ್ನು ಖರೀದಿ ಮಾಡಬಾರದು. ಬಿತ್ತನೆ ಬೀಜದ ಚೀಲ, ಸ್ವಲ್ಪ ಪ್ರಮಾಣದ ಬಿತ್ತನೆ ಬೀಜ, ಧೃಡೀಕರಣದ ಬಗ್ಗೆ ಲಗತ್ತಿಸಿರುವ ಟ್ಯಾಗ್‌ಗಳನ್ನು ಬೆಳೆ ಕಟಾವು ಆಗುವವರೆಗೆ ಕಾಯ್ದಿಟ್ಟುಕೊಳ್ಳಬೇಕು. ಈ ರೀತಿ ಮಾಡುವುದರಿಂದ ಬೆಳೆ ಹಾನಿ ಆದಾಗ ಮಾರಾಟಗಾರರು/ಉತ್ಪಾದಕರ ವಿರುದ್ಧ ಗ್ರಾಹಕರ ವೇದಿಕೆಯಲ್ಲಿ ಪ್ರಕರಣ ದಾಖಲಿಸಬಹುದು.

ರೈತರು ಬಿತ್ತನೆ ಕೈಗೊಳ್ಳುವಾಗ ಬಿತ್ತನೆ ಬೀಜಗಳನ್ನು ಜೈವಿಕ ಗೊಬ್ಬರ/ಜೈವಿಕ ಪೀಡೆನಾಶಕ ಇತ್ಯಾದಿಗಳಿಂದ ಬೀಜೋಪಚಾರ ಕೈಗೊಂಡು ಬಿತ್ತುವುದು. ಇದರಿಂದ ಬೆಳೆಗಳಲ್ಲಿ ಕೀಟ ಮತ್ತು ರೋಗದ ಬಾಧೆ ಕಡಿಮೆಯಾಗಿ ಮುಂದೆ ಕೊಡಬಹುದಾದ ರಸಗೊಬ್ಬರಗಳ/ಪೀಡೆನಾಶಕಗಳ ಪ್ರಮಾಣವನ್ನು ಗಣನೀಯವಾಗಿ ಕಡಿಮೆ ಮಾಡಿ, ಮಣ್ಣಿನ ಆರೋಗ್ಯ ಕಾಪಾಡಬಹುದು. ರಸಗೊಬ್ಬರ ಹಾಗೂ ಪೀಡೆನಾಶಕಗಳ ಬಳಕೆಗಾಗಿ ಮಾಡುವ ವೆಚ್ಚವನ್ನು ಕಡಿಮೆ ಮಾಡಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶೂನ್ಯ ಸಾಧನೆಯ ಸಾಧನಾ ಸಮಾವೇಶ




■ವಿಜಯಸಾಕ್ಷಿ ಸುದ್ದಿ, ಗದಗ

ಎರಡು ವರ್ಷದ ಹಿಂದೆ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಯಾವುದೇ ಸಾಧನೆಯನ್ನು ಮಾಡದೇ ಮೇ. 20ರಂದು ಸಾಧನಾ ಸಮಾವೇಶ ಹಮ್ಮಿಕೊಂಡಿದ್ದು, ಇದು ಶೂನ್ಯ ಸಾಧನೆಯ ಸಮಾವೇಶವಾಗಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ರಾಜ್ಯ ಸರ್ಕಾರದ ನಡೆಯನ್ನು ಟೀಕಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿ, ಬಹಳಷ್ಟು ಭರವಸೆಗಳೊಂದಿಗೆ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದುಕೊಂಡಿಲ್ಲ. 5 ಗ್ಯಾರಂಟಿಗಳನ್ನು ನೀಡಿ ಇದನ್ನೇ ಪ್ರಚಾರ ಮಾಡುತ್ತಿದ್ದಾರೆ. ಕೇವಲ 5 ಗ್ಯಾರಂಟಿಗಳಿಂದ ರಾಜ್ಯದ ಅಭಿವೃದ್ಧಿಯಾಗದು. 2 ವರ್ಷಗಳ ಅವಧಿಯಲ್ಲಿ ರಾಜ್ಯ ಸರ್ಕಾರದ ಯಾವುದೇ ಇಲಾಖೆಯಲ್ಲಿ ಅಭಿವೃದ್ಧಿಗಳೇ ಆಗಿಲ್ಲ. ಎಸ್.ಸಿ,ಎಸ್.ಟಿಗಾಗಿ ಮೀಸಲಿಟ್ಟಿದ್ದ 38 ಸಾವಿರ ಕೋಟಿ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗಾಗಿ ಬಳಸಿಕೊಂಡಿದ್ದು ಆ ಸಮಾಜಕ್ಕೆ ಸರ್ಕಾರ ದೊಡ್ಡ ಆಘಾತವನ್ನೇ ನೀಡಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದುಹೋಗಿದೆ. ಪ್ರತಿಯೊಂದು ವಸ್ತುವಿನ ಬೆಲೆಯನ್ನು ಏರಿಸಿದ್ದು ಈ ಸರ್ಕಾರದ ಸಾಧನೆಯಾಗಿದೆ ಎಂದಿದ್ದಾರೆ.

ಅಲ್ಪಸಂಖ್ಯಾತರಿಗೆ ಮಾತ್ರ ಸಾಕಷ್ಟು ಯೋಜನೆಗಳನ್ನು ತಂದು ಬಹುಸಂಖ್ಯಾತ ಹಿಂದೂಗಳಿಗೆ ಅನ್ಯಾಯ ಮಾಡಿದ್ದಾರೆ. ಕಾಂಗ್ರೆಸ್ ಪಕ್ಷದ ಶಾಸಕರಾದ ಬಸವರಾಜ ರಾಯರೆಡ್ಡಿರವರು ರಾಜ್ಯ ಸರ್ಕಾರ ಭ್ರಷ್ಟಾಚಾರದಲ್ಲಿ ಇಡೀ ದೇಶದಲ್ಲಿಯೇ ನಂಬರ್ 1 ಸ್ಥಾನದಲ್ಲಿ ಇದೆ ಎಂದು ಹೇಳಿರುವುದು ರಾಜ್ಯ ಸರ್ಕಾರದ ಕಾರ್ಯವೈಖರಿಗೆ ಸಾಕ್ಷಿಯಾಗಿದೆ ಎಂದು ತೋಟಪ್ಪ(ರಾಜು) ಕುರುಡಗಿ ರಾಜ್ಯ ಸರ್ಕಾರದ ವಿರುದ್ಧ ಹರಿಹಾಯ್ದಿದ್ದಾರೆ.


ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಲಿಂಗರಾಜ ಪಾಟೀಲ ಮಲ್ಲಾಪೂರ, ಪಕ್ಕಿರೇಶ ರಟ್ಟಿಹಳ್ಳಿ, ಆರ್.ಕೆ. ಚವ್ಹಾಣ, ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ, ಶಹರ ಅಧ್ಯಕ್ಷ ಸುರೇಶ ಮರಳಪ್ಪನವರ, ಗ್ರಾಮೀಣ ಅಧ್ಯಕ್ಷ ಬೂದಪ್ಪ ಹಳ್ಳಿ, ತಾ.ಪಂ ಮಾಜಿ ಅಧ್ಯಕ್ಷ ಬಿ.ಎಸ್. ಚಿಂಚಲಿ ರಾಜ್ಯ ಸರ್ಕಾರದ 2 ವರ್ಷದ ಆಡಳಿತವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

# ಹೆಬ್ಬಾಳ್ಕರ್ ವಿರುದ್ಧ ಅವಹೇಳನಕಾರಿ ಪದ ಬಳಕೆ ಆರೋಪ: ಸಿ.ಟಿ ರವಿಗೆ ಬಿಗ್ ರಿಲೀಫ್!

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಬೆಳಗಾವಿ ವಿಧಾನಮಂಡಲ ಕಲಾಪದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರ ವಿರುದ್ಧ ಅವಾಚ್ಯ ಪದ ಬಳಕೆ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿಗೆ ಸುಪ್ರೀಂಕೋರ್ಟ್ ಬಿಗ್ ರಿಲೀಫ್ ನೀಡಿದೆ.

ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧ ಅವಹೇಳನಕಾರಿ ಪದಗಳನ್ನು ಬಳಸಿದ ಆರೋಪದ ಮೇಲೆ ಬಿಜೆಪಿ ಶಾಸಕ ಸಿ.ಟಿ. ರವಿ ವಿರುದ್ಧ ದಾಖಲಾಗಿದ್ದ ಪ್ರಕರಣವನ್ನು ರದ್ದುಗೊಳಿಸಲು ಕರ್ನಾಟಕ ಹೈಕೋರ್ಟ್ ನಿರಾಕರಿಸಿತ್ತು.



ಈ ಆದೇಶವನ್ನು ಪ್ರಶ್ನಿಸಿ ಸಿಟಿ ರವಿ ಅವರು ಸುಪ್ರೀಂಕೋರ್ಟ್ ಮೆಟ್ಟಿಲೇರಿದ್ದರು. ಸೋಮವಾರ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ಎಂ. ಸುಂದ್ರೇಶ್ ಮತ್ತು ನ್ಯಾಯಮೂರ್ತಿ ರಾಜೇಶ್ ಬಿಂದಾಲ್ ಅವರ ಸುಪ್ರೀಂಕೋರ್ಟ್ ಪೀಠ, ಸಿ.ಟಿ. ರವಿ ವಿರುದ್ಧ ವಿಚಾರಣಾ ಪ್ರಕ್ರಿಯೆಗಳಿಗೆ ತಡೆ ನೀಡಿ ಆದೇಶ ಹೊರಡಿಸಿದೆ.

# ಕೇಂದ್ರದಿಂದ ಕರ್ನಾಟಕಕ್ಕೆ ಅನುದಾನ ಬಿಡುಗಡೆಯಾಗಿಲ್ಲ ಎಂದ ಸಿದ್ದು ಆರೋಪಕ್ಕೆ ಉತ್ತರ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೇಂದ್ರದಿಂದ ಕರ್ನಾಟಕಕ್ಕೆ ಅನುದಾನ ಬಿಡುಗಡೆಯಾಗಿಲ್ಲ ಎಂಬ ಸಿದ್ದರಾಮಯ್ಯ ಹೇಳಿಕೆಗೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಪ್ರತಿಕ್ರಿಯೆ ಕೊಟ್ಟಿದ್ದಾರೆ.

ಈ ಸಂಬಂಧ ಫಿ ಮಾಡಿರುವ ಅವರು, ಕೇಂದ್ರ ಸರ್ಕಾರ ಕೊಟ್ಟ ಹಣವನ್ನು ಸರಿಯಾಗಿ ಬಳಸದೇ ಕರ್ನಾಟಕ ಮುಖ್ಯಮಂತ್ರಿಗಳು ವೃಥಾ ಆರೋಪ ಮಾಡುತ್ತಿದ್ದಾರೆ. ತಮ್ಮ ಹಣಕಾಸು ನಿರ್ವಹಣೆಯ ಅಸಮರ್ಥತೆ ಮುಚ್ಚಿಹಾಕಲು ಕೇಂದ್ರದ ಮೇಲೆ ಗೂಬೆ ಕೂರಿಸುತ್ತಿದ್ದಾರೆ ಎಂದರು. ಕೇಂದ್ರದಿಂದ ಹಣ ಬಿಡುಗಡೆಯಾಗದ ಒಂದೇ ಒಂದು ಯೋಜನೆಯನ್ನು ಸಿದ್ದರಾಮಯ್ಯ ಹೆಸರಿಸಲಿ ನೋಡೋಣ ಎಂದು ಸವಾಲೆಸೆದಿದ್ದಾರೆ.

# ಆರೋಗ್ಯದ ಬಗ್ಗೆ ನಿಷ್ಕಾಳಜಿ ಬೇಡ



■ವಿಜಯಸಾಕ್ಷಿ ಸುದ್ದಿ, ಗದಗ

ಮನುಷ್ಯನಿಗೆ ಆರೋಗ್ಯವೇ ಮಹಾ ಭಾಗ್ಯವಾಗಿದೆ. ಆರೋಗ್ಯದ ಬಗ್ಗೆ ಯಾರೂ ನಿಷ್ಕಾಳಜಿ ಮಾಡಬಾರದು ಎಂದು ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ (ಉಖಾ) ಕುಮಾರ ಪೂಜಾರ ತಿಳಿಸಿದರು.

ತಾಲೂಕಿನ ಕಳಸಾಪೂರ ಗ್ರಾಮ ಪಂಚಾಯಿತಿಯ ನರೇಗಾ ಕಾಮಗಾರಿ ಸ್ಥಳದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆಯುಷ್ಮಾನ್ ಆರೋಗ್ಯ ಮಂದಿರ (ಎಎಂ) ಕಳಸಾಪೂರ ಇವುಗಳ ಆಶ್ರಯದಲ್ಲಿ ಆಯೋಜಿಸಿದ್ದ ಆರೋಗ್ಯ ಶಿಬಿರದಲ್ಲಿ ಅವರು ಮಾತನಾಡಿದರು.

ಕಾಲ ಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ತಾಲೂಕಿನ ಬಹುತೇಕ ಗ್ರಾಮಗಳಲ್ಲಿಯ ಉದ್ಯೋಗ ಖಾತ್ರಿ ಕಾಮಗಾರಿ ಸ್ಥಳದಲ್ಲಿ ಆರೋಗ್ಯ ತಪಾಸಣೆ ಮಾಡಲಾಗಿದೆ. ಬಡ ಕೂಲಿಕಾರರಿಗೆ ಉಚಿತ ಆರೋಗ್ಯ ಶಿಬಿರದಿಂದ ತುಂಬಾ ಅನುಕೂಲವಾಗಿದೆ ಎಂದರು.

ಸಮುದಾಯ ಆರೋಗ್ಯ ಅಧಿಕಾರಿ ಡಾ. ಎಲ್. ಕೃಷ್ಣ ಮಾತನಾಡಿ, ಉತ್ತಮ ಆರೋಗ್ಯ ಕಲ್ಪಿಸುವ ನಿಟ್ಟಿನಲ್ಲಿ ಕಾಮಗಾರಿ ಸ್ಥಳದಲ್ಲಿಯೇ ಬಿಪಿ, ಶುಗರ್, ಮಧುಮೇಹ, ಅತಿ ರಕ್ತದೊತ್ತಡದಂತಹ ಪ್ರಾಥಮಿಕ ಅಸಾಂಕ್ರಾಮಿಕ ಗುಣಲಕ್ಷಣಗಳನ್ನು ಪತ್ತೆಹಚ್ಚಿ ಸೂಕ್ತ ಸಮಾಲೋಚನೆ ಮಾಡಲಾಗುವುದು ಎಂದು ತಿಳಿಸಿದರು.

ಗ್ರಾ.ಪಂ ಅಧ್ಯಕ್ಷರಾದ ಅನಸೂಯಾ ಬೆಟಗೇರಿ, ಉಪಾಧ್ಯಕ್ಷರಾದ ರಾಜೇಶ್ವರಿ ಘೋಡಕೆ, ತಾ.ಪಂ ಐಇಸಿ ವೀರೇಶ ಬಸನಗೌಡ್ರ, ಗ್ರಾ.ಪಂ ಕಾರ್ಯದರ್ಶಿ ಪ್ರೀತಮ್ ಬಳ್ಳಾರಿ, ಗ್ರಾ.ಪಂ ಸಿಬ್ಬಂದಿಗಳಾದ ಶರಣಪ್ಪ ಹುಯಿಲಗೋಳ, ಮಾರುತಿ ಚಲವಾದಿ, ಬಿಎಫ್‌ಟಿ ದುರ್ಗಪ್ಪ ಆಲೂರ, ಮೈಲಾರಪ್ಪ ಸೋಮನಕಟ್ಟಿ, ಆರೋಗ್ಯ ಇಲಾಖೆಯ ಎಲ್. ಎಂ. ದೇವದುರ್ಗ, ಆಶಾ ಕಾರ್ಯಕರ್ತೆಯರಾದ ಬಸವಣ್ಣೆಮ್ಮ ಓಲೇಕಾರ, ಲಲಿತಾ ತಳವಾರ, ರತ್ನ ಲಮಾಣಿ, ಚನ್ನಮ್ಮ ಮಾದರ ಸೇರಿದಂತೆ ಕಾಯಕ ಬಂಧುಗಳು ಹಾಗೂ ಕೂಲಿಕಾರರು ಇದ್ದರು.

**ಐದು ನವೀಕೃತ ನಿಲ್ದಾಣಗಳು ಲೋಕಾರ್ಪಣೆಗೆ ಸಜ್ಜು | ಮೇ 22ರಂದು ಲೋಕಾರ್ಪಣೆ**

# ನೈಋತ್ಯ ರೈಲ್ವೆಗೆ ಅಮೃತ ಸ್ಪರ್ಶ




■ ವಿಜಯಸಾಕ್ಷಿ ಸುದ್ದಿ, ಗದಗ

ನೈರುತ್ಯ ರೈಲ್ವೆ ವಿಭಾಗದ ಐದು ಪ್ರಮುಖ ರೈಲ್ವೆ ನಿಲ್ದಾಣಗಳು ನವೀಕರಣಗೊಂಡು ಹೊಸ ರೂಪ ಪಡೆದುಕೊಂಡಿದ್ದು, ಮೇ 22ರಂದು ಲೋಕಾರ್ಪಣೆಗೊಳ್ಳಲು ಸಿದ್ಧವಾಗಿವೆ. ಗದಗ, ಧಾರವಾಡ, ಗೋಕಾಕ, ಬಾಗಲಕೋಟೆ ಹಾಗೂ ಕೊಪ್ಪಳ ಜಿಲ್ಲೆಯ ಮುನಿರಾಬಾದ್ ರೈಲ್ವೆ ನಿಲ್ದಾಣಗಳು ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ 'ಅಮೃತ ಭಾರತ್ ರೈಲ್ವೆ ಸ್ಟೇಷನ್ ಯೋಜನೆ'ಯ ಅಡಿಯಲ್ಲಿ ಮೇಲ್ದರ್ಜೆಗೇರಿಸಲ್ಪಟ್ಟಿವೆ. ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಮೇ 22ರಂದು ವರ್ಚುವಲ್ ಕಾರ್ಯಕ್ರಮದ ಮೂಲಕ ಈ ನವೀಕೃತ ನಿಲ್ದಾಣಗಳನ್ನು ದೇಶಕ್ಕೆ ಸಮರ್ಪಿಸಲಿದ್ದಾರೆ.

ವಿಶ್ವದರ್ಜೆಯ ಸೌಲಭ್ಯಗಳು ಹಾಗೂ ಆಯಾ ಪ್ರದೇಶದ ವಿಶಿಷ್ಟ ಸಂಸ್ಕೃತಿ ಮತ್ತು ಪರಂಪರೆಯನ್ನು ಬಿಂಬಿಸುವ ರೀತಿಯಲ್ಲಿ ಈ ನಿಲ್ದಾಣಗಳನ್ನು ಅಭಿವೃದ್ಧಿಪಡಿಸಲಾಗಿದೆ. ಈ ಎಲ್ಲಾ ನಿಲ್ದಾಣಗಳಲ್ಲೂ ಏಕರೂಪದ ಪ್ರವೇಶ ದ್ವಾರವನ್ನು ನಿರ್ಮಿಸಲಾಗಿದೆ. ಪ್ರಯಾಣಿಕರ ಸುಗಮ ಸಂಚಾರಕ್ಕಾಗಿ 12 ಮೀಟರ್ ಅಗಲದ ಪಾದಾಚಾರಿ ಮೇಲ್ಸೇತುವೆ, ಲಿಫ್ಟ್ ಮತ್ತು ಎಸ್ಕಲೇಟರ್ ಸೌಲಭ್ಯಗಳನ್ನು ಒದಗಿಸಲಾಗಿದೆ. ಟಿಕೆಟ್ ಕಾಯ್ದಿರಿಸುವಿಕೆ ಹಾಗೂ ಸಾಮಾನ್ಯ ಟಿಕೆಟ್ ಕೊಳ್ಳುವಿಕೆಗಾಗಿ ಕನಿಷ್ಠ ಮೂರು ಮತ್ತು ಗರಿಷ್ಠ ಐದು ಕೌಂಟರ್‌ಗಳನ್ನು ಸ್ಥಾಪಿಸಲಾಗಿದೆ.

ಪ್ರಯಾಣಿಕರ ಅನುಕೂಲಕ್ಕಾಗಿ ಸ್ಥಳೀಯ ಉತ್ಪನ್ನಗಳ ಮಾರಾಟ ಮಳಿಗೆಗಳು, ಸುಸಜ್ಜಿತ ಶೌಚಾಲಯಗಳು (ಮಹಿಳೆಯರು ಮತ್ತು ಪುರುಷರಿಗೆ ಪ್ರತ್ಯೇಕ ಹಾಗೂ ವಿಶೇಷ ಚೇತನರಿಗೆ ಪ್ರತ್ಯೇಕ ವ್ಯವಸ್ಥೆ), ವಿಶಾಲವಾದ ಕಾಯುವ ಕೊಠಡಿಗಳು, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಉಪಹಾರ ಗೃಹಗಳನ್ನು ಒಳಗೊಂಡಿವೆ. ಈ ಎಲ್ಲಾ ಸೌಲಭ್ಯಗಳು ಪ್ರಯಾಣಿಕರಿಗೆ ಆರಾಮದಾಯಕ ಹಾಗೂ ಉತ್ತಮ ಪ್ರಯಾಣದ ಅನುಭವವನ್ನು ನೀಡಲು ಸಜ್ಜಾಗಿವೆ. ಗದುಗಿನಲ್ಲಿ ಜಿ+1 ಮಾದರಿಯ ಕಟ್ಟಡವನ್ನು ಹೊಂದಿದ್ದು, ಪ್ಲಾಟ್‌ಫಾರ್ಮ್ ನಂಬರ್ 2ರಲ್ಲಿ ಎಸ್ಕಲೇಟರ್ ಹಾಗೂ ಎಲ್ಲಾ ಪ್ಲಾಟ್‌ಫಾರ್ಮ್‌ಗಳಲ್ಲಿ ಲಿಫ್ಟ್ ಅಳವಡಿಸಲಾಗಿದೆ. ನಿಲ್ದಾಣದ ಹೊರ ಆವರಣದಲ್ಲಿ ಬಸ್ ನಿಲ್ದಾಣ, ಆಟೋ ನಿಲ್ದಾಣ, ವಾಹನ ನಿಲುಗಡೆ ಪ್ರದೇಶ, ಸ್ಟೇಷನ್ ಮ್ಯಾನೇಜರ್ ಕೊಠಡಿ ಮತ್ತು ಸ್ಪಷ್ಟ ಸೂಚನಾ ಫಲಕಗಳನ್ನು ಅಳವಡಿಸಲಾಗಿದೆ. ಈ ನಿಲ್ದಾಣಗಳ ನಿರ್ಮಾಣಕ್ಕಾಗಿ ಗೋಕಾಕ–16.98 ಕೋಟಿ ರೂ, ಧಾರವಾಡ–17.1 ಕೋಟಿ ರೂ, ಮುನಿರಾಬಾದ್–18.4 ಕೋಟಿ ರೂ, ಗದಗ–23.24 ಕೋಟಿ ರೂ, ಬಾಗಲಕೋಟೆ–16.06 ಕೋಟಿ ರೂ ವೆಚ್ಚ ಮಾಡಲಾಗಿದೆ.

### ಕೊನೆಯ ಕ್ಷಣದ ಸಿದ್ಧತೆ

ಲೋಕಾರ್ಪಣೆ ಸಮೀಪಿಸುತ್ತಿದ್ದಂತೆ, ನಿಲ್ದಾಣಗಳಲ್ಲಿ ಕೊನೆಯ ಹಂತದ ಕಾಮಗಾರಿಗಳು ಭರದಿಂದ ಸಾಗಿವೆ. ಲಿಫ್ಟ್ ಮತ್ತು ಎಸ್ಕಲೇಟರ್‌ಗಳ ಪರೀಕ್ಷೆ, ಟಿಕೆಟ್ ಕೌಂಟರ್‌ಗಳ ಸ್ಥಳಾಂತರ ಹಾಗೂ ನಿಲ್ದಾಣದ ಸ್ವಚ್ಛತಾ ಕಾರ್ಯಗಳು ವೇಗವಾಗಿ ನಡೆಯುತ್ತಿವೆ.

### ಅಧಿಕಾರಿಗಳ ಅಭಿಪ್ರಾಯ

ನೈರುತ್ಯ ರೈಲ್ವೆ ವಲಯದ ಸಾರ್ವಜನಿಕ ಮುಖ್ಯ ಸಂಪರ್ಕಾಧಿಕಾರಿ ಡಾ. ಮಂಜುನಾಥ ಕನಮಡಿಯವರು ಈ ಬಗ್ಗೆ ಮಾತನಾಡಿ, ಅಮೃತ ಭಾರತ್ ರೈಲ್ವೆ ನಿಲ್ದಾಣ ಯೋಜನೆಯಡಿ ನೈರುತ್ಯ ರೈಲ್ವೆ ವಲಯದ 5 ನಿಲ್ದಾಣಗಳು ನವೀಕರಣಗೊಂಡಿದ್ದು, ಮೇ 22ರಂದು ಲೋಕಾರ್ಪಣೆಗೆ ಸಿದ್ಧವಾಗಿವೆ ಎಂದು ತಿಳಿಸಿದರು.





# ನಿಡಗುಂದಿ ಗ್ರಾ.ಪಂಗೆ ಅವಿರೋಧ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ನಿಡಗುಂದಿ ಗ್ರಾಮ ಪಂಚಾಯಿತಿಯಲ್ಲಿ ಸದಸ್ಯರೊಬ್ಬರ ನಿಧನದಿಂದ ತೆರವಾಗಿದ್ದ ಸ್ಥಾನಕ್ಕೆ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಇಮಾಮಸಾಬ ಮಾದರಸಾಬ ಬಾಗವಾನ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಮುರ್ತುಜಾ ಖಾದರ್ ಮುಲ್ಲಾ ಅವರ ನಿಧನದಿಂದ ತೆರವಾಗಿದ್ದ ಸ್ಥಾನಕ್ಕೆ ಶನಿವಾರ ಚುನಾವಣೆ ಜರುಗಿತು. ಚುನಾವಣಾಧಿಕಾರಿಯಾಗಿ ರೋಣ ತಾಲೂಕು ಶಿಶು ಅಭಿವೃದ್ಧಿ ಅಧಿಕಾರಿ ವಿರೂಪಾಕ್ಷಯ್ಯ ಹಿರೇಮಠ ಕಾರ್ಯ ನಿರ್ವಹಿಸಿದರು. ಇಮಾಮಸಾಬ ಬಾಗವಾನ ಹೊರತುಪಡಿಸಿ ಬೇರೆ ಯಾವುದೇ ನಾಮಪತ್ರಗಳು ಸಲ್ಲಿಕೆಯಾಗದ್ದರಿಂದ ಚುನಾವಣಾಧಿಕಾರಿ ಬಾಗವಾನರ ಆಯ್ಕೆಯನ್ನು ಅವಿರೋಧವೆಂದು ಘೋಷಿಸಿದರು. ನಿಡಗುಂದಿ ಗ್ರಾಮ ಪಂಚಾಯಿತಿಗೆ ಅವಿರೋಧವಾಗಿ ಆಯ್ಕೆಯಾದ ಇಮಾಮಸಾಬ್ ಬಾಗವಾನ ಅವರನ್ನು ತಾ.ಪಂ ಮಾಜಿ ಸದಸ್ಯ ಅಂದಪ್ಪ ಬಿಚ್ಚೂರ ನೇತೃತ್ವದಲ್ಲಿ ಅಭಿನಂದಿಸಿ ಗೌರವಿಸಿದರು.

**ಕಸಾಪ, ಚಕೋರ ಸಾಹಿತ್ಯ ವಿಚಾರ ವೇದಿಕೆಯಿಂದ ವಿಶೇಷ ಕಾರ್ಯಕ್ರಮ**

# ಕನ್ನಡದ ಕವಿಗಳನ್ನು ಪರಿಚಯಿಸುವ ಕಾರ್ಯವಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಸಾಹಿತ್ಯ ಲೋಕಕ್ಕೆ ಗದಗ ಜಿಲ್ಲೆಯು ಅಪಾರ ಕೊಡುಗೆಯನ್ನು ನೀಡಿದೆ. ಅಂತಹ ಭವ್ಯ ಪರಂರೆಯ ಇತಿಹಾಸವನ್ನು ಅವಲೋಕನ ಮಾಡಿ ಅದನ್ನು ಇನ್ನಷ್ಟು ಪ್ರಸಾರ ಮಾಡುವ ಕಾರ್ಯವು ಕರ್ನಾಟಕ ಸಾಹಿತ್ಯ ಅಕಾಡೆಮಿ ಬೆಂಗಳೂರಿನ ಚಕೋರ ಸಾಹಿತ್ಯ ವಿಚಾರ ವೇದಿಕೆ ವತಿಯಿಂದ ಗದಗ ಜಿಲ್ಲೆಯಲ್ಲಿ ನಿರಂತರ ನಡೆಯುವಂತಾಗಲಿ ಎಂದು ಸಾಹಿತಿ, ಉಪನ್ಯಾಸಕಿ ಸುಧಾ ಹುಚ್ಚಣ್ಣವರ ಹೇಳಿದರು.

ಕರ್ನಾಟಕ ಸಾಹಿತ್ಯ ಅಕಾಡೆಮಿ ಬೆಂಗಳೂರು, ಚಕೋರ ಸಾಹಿತ್ಯ ವಿಚಾರ ವೇದಿಕೆ ಗದಗ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಗದಗ ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗದಗ ಜಿಲ್ಲೆಯ ಪ್ರಾಚೀನ ಕವಿಗಳಾದ ನಯಸೇನ, ಜಾಮರಸ, ದುರ್ಗಸಿಂಹ, ಕುಮಾರವ್ಯಾಸ ಮೊದಲಾದವರ ಕೃತಿಗಳ ಓದು ಕಾರ್ಯಕ್ರಮಗಳು ನಡೆಯಲಿ ಎಂದು ಹೇಳಿದರು.

ನಯಸೇನನ ಧರ್ಮಾಮೃತ ಕುರಿತು ವಿಶೇಷ ಉಪನ್ಯಾಸ ನೀಡಿದ ಡಾ. ಅಂದಯ್ಯ ಅರವಟಗಿಮಠ, 11ನೇ ಶತಮಾನದ ಪೂರ್ವಾರ್ಧದಲ್ಲಿ ಧರ್ಮಾಮೃತ ಎಂಬ ಚಂಪೂ ಕೃತಿ ರಚನೆ ಮಾಡಿದ ಮುಳುಗುಂದದ ನಯಸೇನ ಒಬ್ಬ ದಿಗಂಬರ ಜೈನ ಸನ್ಯಾಸಿ. ಆ ಕಾಲದಲ್ಲಿಯ ಜೈನ ಧರ್ಮದ ತತ್ವ–ಸಿದ್ಧಾಂತಗಳ ಪ್ರಸಾರಕ್ಕಾಗಿ ಅವಿರತ ಪ್ರಯತ್ನ ಮಾಡಿದನು. ಅಲ್ಲದೆ ಇದುವರೆಗಿನ ಕಾವ್ಯ ಮಾರ್ಗವನ್ನು ಬದಲಿಸಿ ಜನಸಾಮಾನ್ಯರನ್ನು ಒಳಗೊಳ್ಳುವಂತೆ ಕಾವ್ಯ ಬರೆದಿರುವುದು ಅತ್ಯಂತ ಮಹತ್ವದ್ದು. ಇದು ಒಟ್ಟು ಹದಿನಾಲ್ಕು ಕತೆಗಳ ಸಂಗ್ರಹ. ಜೈನ ಧರ್ಮ ಇಳಿಮುಖವಾಗುತ್ತಿರುವ ಅಂದಿನ ಕಾಲದಲ್ಲಿ ಜನಸಾಮಾನ್ಯರಿಗೆ ಅರ್ಥವಾಗುವ ರೀತಿಯಲ್ಲಿ ಸರಳವಾಗಿ ಕಾವ್ಯ ಬರೆದ ಜನಪದ ಕವಿ ನಯಸೇನ ಎಂಬುದು ಗಮನಾರ್ಹ ಸಂಗತಿ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಕನ್ನಡ ಸಾಹಿತ್ಯದ ಪ್ರಕಾರಗಳನ್ನು, ಕವಿಗಳನ್ನು ಪರಿಚಯಿಸುವ ಕಾರ್ಯವನ್ನು ಚಕೋರ ವೇದಿಕೆಯು ಮಾಡಲಿ ಎಂದು ಆಶಿಸಿದರು.

ಚಕೋರ ಸಾಹಿತ್ಯ ವಿಚಾರ ವೇದಿಕೆಯ ಗುರಿ ಉದ್ದೇಶಗಳ ಕುರಿತು ಕರ್ನಾಟಕ ಸಾಹಿತ್ಯ ಅಕಾಡೆಮಿಯ ಸದಸ್ಯ ಸಂಚಾಲಕರಾದ ಡಾ. ಅರ್ಜುನ ಗೊಳಸಂಗಿ ತಿಳಿಸಿದರು. ಮುಖ್ಯ ಅತಿಥಿಗಳಾಗಿ ಡಾ. ಜಿ.ಬಿ. ಪಾಟೀಲ ಭಾಗವಹಿಸಿದ್ದರು. ಶಿಲ್ಪಾ ಮ್ಯಾಗೇರಿ ಸ್ವಾಗತಿಸಿದರು. ಚಕೋರ ವೇದಿಕೆಯ ಸಂಚಾಲಕರಾದ ಎಸ್. ಯು. ಸಜ್ಜನಶೆಟ್ಟರ ಕಾರ್ಯಕ್ರಮವನ್ನು ನಿರೂಪಿಸಿದರು. ಜಿಲ್ಲಾ ಕಸಾಪ ಕಾರ್ಯದರ್ಶಿ ಬಾಪುರೆ ವಂದಿಸಿದರು.



ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ತುಮಕೂರಿನ ಜಿಲ್ಲಾ ಕಸಾಪ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತು, ಕರ್ನಾಟಕ ಸಾಹಿತ್ಯ ಅಕಾಡೆಮಿಗಳೆಲ್ಲ ನಮ್ಮ ಹೆಮ್ಮೆಯ ಅಭಿಮಾನದ ಕನ್ನಡ ಸಾಹಿತ್ಯ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯುವ ಕೆಲಸವನ್ನು ಮಾಡಬೇಕಾದ ಅಗತ್ಯವಿದೆ ಎಂದರು.

# ತಾಯಿ–ಮಗುವಿನ ಸಂಬಂಧ ವಿಶಿಷ್ಟವಾದುದು



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ದೇವರು ತಾನು ಎಲ್ಲೆಡೆ, ಎಲ್ಲರ ಬಳಿ ಇರಲು ಸಾಧ್ಯವಿಲ್ಲ ಎಂದೇ ತಾಯಿಯನ್ನು ಸೃಷ್ಟಿಸಿದ್ದಾನೆ. ತಾಯಿ ಈ ಜಗದ ಕಣ್ಣಾಗಿದ್ದಾಳೆ ಎಂದು ಬಿ.ಕೆ. ಸವಿತಕ್ಕ ಹೇಳಿದರು.

ಪಟ್ಟಣದ ಈಶ್ವರೀಯ ವಿಶ್ವ ವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ ತಾಯಂದಿರ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ತಾಯಿ ಒಂದು ಮಗುವನ್ನು ಹೊತ್ತು, ಹೆತ್ತು, ಸಾಕಿ, ಸಲುಹಿ ಈ ಜಗತ್ತಿಗೆ ನೀಡುತ್ತಾಳೆ. ಶಾಲೆಗೆ ಹೋಗುವ ಮುಂಚೆ ಅದಕ್ಕೆ ಬೇಕಾದ ಎಲ್ಲ ಸಂಸ್ಕಾರವನ್ನು ಆಕೆಯೇ ನೀಡುತ್ತಾಳೆ. ತಾಯಿ–ಮಗುವಿನ ಸಂಬಂಧ ಅನ್ಯೋನ್ಯವಾಗಿದ್ದು, ಮಗು ದೊಡ್ಡದಾಗಿ ಬೆಳೆದು ಸಮಾಜದಲ್ಲಿ ಉನ್ನತ ಸ್ಥಾನಕ್ಕೇರಿದಾಗ ಅದನ್ನು ಕಂಡು ಸಂತೋಷಿಸುತ್ತಾಳೆ. ಮಗುವಿಗೆ ತಾಯಿಯೇ ಸರ್ವಸ್ವ. ಆದ್ದರಿಂದ ತಾಯಿಗೆ ಈ ಜಗತ್ತಿನಲ್ಲಿ ವಿಶೇಷವಾದ ಸ್ಥಾನವಿದೆ ಎಂದರು.

ತಾಯಂದಿರ ದಿನಾಚರಣೆಯ ದಿನ ಮಾತ್ರ ತಾಯಂದಿರನ್ನು ಹೊಗಳಿ ಪೂಜಿಸಿದರೆ ಸಾಲದು. ನಿತ್ಯವೂ ಆಕೆಯ ಪೂಜೆಯನ್ನು ಮಾಡಬೇಕು. ಇಂದಿನ ದಿನಗಳಲ್ಲಿ ಮಕ್ಕಳು ಬೆಳೆದು ದೊಡ್ಡವರಾದ ಮೇಲೆ ತಂದೆ–ತಾಯಿಗಳನ್ನು ಅಸಡ್ಡೆ ಮಾಡುವದನ್ನು ಕಾಣುತ್ತೇವೆ. ಅವರನ್ನು ಸಾಕಲಾಗದೆ ಅವರನ್ನು ಅನಾಥಾಶ್ರಮಗಳಿಗೆ ಕಳಿಸುವುದನ್ನು ನೋಡುತ್ತೇವೆ. ತಾಯಂದಿರ ಆಚರಣೆಯ ದಿನ ನಾವೆಲ್ಲರೂ ತಂದೆ–ತಾಯಿಗಳನ್ನು ಚೆನ್ನಾಗಿ ನೋಡಿಕೊಳ್ಳುತ್ತೇವೆ ಎಂಬ ಶಪಥ ಮಾಡಬೇಕೆಂದು ಬಿ.ಕೆ. ಸವಿತಕ್ಕ ಹೇಳಿದರು.

ತಾಯಂದಿರ ದಿನಾಚರಣೆಯ ಮಹತ್ವ ಕುರಿತು ಅನೇಕ ತಾಯಂದಿರು ಮಾತನಾಡಿದರು.

# ನದಿಗೆ ಉರುಳಿಬಿದ್ದ ಕಾರು: ಐವರು ದುರ್ಮರಣ!

■ ವಿಜಯಸಾಕ್ಷಿ ಸುದ್ದಿ, ರತ್ನಗಿರಿ

ನದಿಗೆ ಕಾರು ಉರುಳಿ ಬಿದ್ದ ಪರಿಣಾಮ ಐವರು ಸಾವನ್ನಪ್ಪಿರುವ ಘಟನೆ ಮಹಾರಾಷ್ಟ್ರದ ರತ್ನಗಿರಿ ಜಿಲ್ಲೆಯಲ್ಲಿ ಜರುಗಿದೆ. ಘಟನೆಯಿಂದ ಕಾರಿನ ಚಾಲಕನಿಗೆ ಗಾಯಗಳಾಗಿದ್ದು, ಅವರನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಮುಂಬೈ–ಗೋವಾ ಹೆದ್ದಾರಿಯಲ್ಲಿ ಮುಂಬೈನಿಂದ ದೇವ್ರುಖ್‌ಗೆ ಪ್ರಯಾಣಿಸುತ್ತಿದ್ದಾಗ ಈ ಅಪಘಾತ ಸಂಭವಿಸಿದೆ. ಬೆಳಗ್ಗೆ 5 ಗಂಟೆ ಸುಮಾರಿಗೆ ಜಗ್ಬುಡಿ ನದಿ ಸೇತುವೆಯಿಂದ ನೇರವಾಗಿ 100 ಅಡಿ ಕೆಳಗೆ ಕಾರು ಬಿದ್ದಾಗ ಅಪಘಾತ ಸಂಭವಿಸಿದೆ. ಕ್ರೇನ್ ಸಹಾಯದಿಂದ ಕಾರನ್ನು ಮೇಲಕ್ಕೆತ್ತಿ, ನಂತರ ಶವಗಳನ್ನು ವಾಹನದಿಂದ ಹೊರತೆಗೆಯಲಾಯಿತು.

ಸೋಮವಾರ ರಾತ್ರಿ ಮುಂಬೈನ ನಲಸೋಪರಾ ಪೂರ್ವದಲ್ಲಿರುವ ತುಲಿಂಜ್ ಪೊಲೀಸ್ ಠಾಣೆಯ ಮುಂದೆ ಭಾರಿ ಟ್ರಾಫಿಕ್ ಜಾಮ್ ಉಂಟಾಗಿತ್ತು. ಆಂಬ್ಯುಲೆನ್ಸ್ ಈ ಟ್ರಾಫಿಕ್‌ನಲ್ಲಿ ಸಿಲುಕಿಕೊಂಡಿತ್ತು, ಸೈರನ್ ಹಾಕಿದ್ದರೂ ದಾರಿಯಲ್ಲಿ ಹೋಗಲು ಸಾಧ್ಯವಾಗಲಿಲ್ಲ. ಪರಿಣಾಮವಾಗಿ, ಆಂಬ್ಯುಲೆನ್ಸ್ ಸ್ವಲ್ಪ ಸಮಯದವರೆಗೆ ರಸ್ತೆಯಲ್ಲಿಯೇ ಇರಬೇಕಾಯಿತು.




# ದೇವರ ದಾಸಿಮಯ್ಯ ಮಹಾನ್ ಅನುಭಾವಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬೆಟಗೇರಿಯ ಪಾಲಾ ಬಾದಾಮಿ ರಸ್ತೆಗೆ ಹೊಂದಿಕೊಂಡಿರುವ ಶ್ರೀ ದೇವರ ದಾಸಿಮಯ್ಯನವರ ಪುತ್ಥಳಿಗೆ 28ನೇ ವಚನ–ವಾಚನ ಕಾರ್ಯಕ್ರಮದ ಅಂಗವಾಗಿ ಶಿವಣ್ಣ ಮುಳಗುಂದ ಪೂಜೆ ಸಲ್ಲಿಸಿದರು.



ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿದ್ದ ಕಪೋತಗಿರಿಯ ಶ್ರೀ ನಂದಿವೇರಿ ಮಠದ ಶ್ರೀ ಶಿವಕುಮಾರ ಸ್ವಾಮಿಗಳು ಮಾತನಾಡಿ, ಆದ್ಯ ವಚನಕಾರ ಶ್ರೀ ದೇವರ ದಾಸಿಮಯ್ಯನವರ ವಚನಗಳು ಪ್ರಸ್ತುತ ಸಮಾಜಕ್ಕೆ ಹಿಡಿದ ಕೈಗನ್ನಡಿಯಾಗಿದೆ. 'ಕರಿಯನಿತ್ತಡೆ ವಲ್ಲೆ, ಸಿರಿಯನಿತ್ತಡೆ ವಲ್ಲೆ, ಹಿರಿದಪ್ಪ ರಾಜ್ಯವನಿತ್ತಡೆ ವಲ್ಲೆ, ನಿಮ್ಮ ಶರಣರ ಸೂಳ್ನುಡಿ ಒಂದರೆಘಳಿಗೆಯಿತ್ತಡೆ ನಿಮ್ಮನಿತ್ತೆ ಕಾಣಾ! ರಾಮನಾಥ' ಎಂಬ ವಚನ ಮಾರ್ಮಿಕವಾಗಿದೆ. ಪ್ರಸ್ತುತ ಅವಶ್ಯಕತೆಗಳಾದ ಕರಿಯ ನಿತ್ತಡೆವಲ್ಲೆಂದರೆ ಅಧಿಕಾರ, ಐಶ್ವರ್ಯ, ಸಾಮ್ರಾಜ್ಯ ಇಂದಿನ ಸಾಮಾನ್ಯ ಜನರ ಬೇಡಿಕೆಗಳಾಗಿವೆ. ಆದರೆ ಇವು ಯಾವುದೂ ಶಾಶ್ವತವಲ್ಲ. ದೇವರ, ಶರಣರ ಸಾನ್ನಿಧ್ಯ ಒಂದು ಶಾಶ್ವತವಾದ ಅನುಭಾವ ನೀಡುತ್ತದೆ. ನೀವು ನನಗೆ ಕೊಡುವುದಾದರೆ 'ಶರಣರ ಸೂಳ್ನುಡಿ' ಕೇಳುವ ಭಾಗ್ಯ ಕೊಡು, ನಿನ್ನ ಚರಣ ಕಮಲದಲ್ಲಿ ನನಗೆ ಶಾಶ್ವತವಾದ ಸ್ಥಾನ ನೀಡಿದರೆ ಸಾಕು ಎನ್ನುವ ಅರ್ಥದಲ್ಲಿ ವಚನ ಸಾದರಪಡಿಸಿದ್ದಾರೆ ಎಂದು ಹೇಳಿದರು. ರಾಮಚಂದ್ರ ಹುಬ್ಬಳ್ಳಿ ಮಾತನಾಡಿ, ಅಜ್ಞಾನವ ಅಳಿಸಿ, ಸುಜ್ಞಾನವ ಕರುಣಿಸಿ ಎನ್ನ ಉದ್ಧರಿಸಿದ ಶ್ರೀಗುರುವೇ ನಿನ್ನ ಚರಣ ಕಮಲಕ್ಕೆ ಶರಣಯ್ಯ ಶರಣು ಎನ್ನುವ ವಚನ, ವಾಚನ ಮಾಡಿದರು. ದೇವಾಂಗ ಸಮಾಜದ ಜಿಲ್ಲಾಧ್ಯಕ್ಷ ದಶರಥರಾಜ ಕೊಳ್ಳಿ ಸ್ವಾಗತಿಸಿದರು. ಸಮಾಜದ ಹಿರಿಯರಾದ ಶ್ರೀನಿವಾಸ ಹುಬ್ಬಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಅನಿಲ ಗಡ್ಡಿ, ಶಂಕರ ಗಂಜಿ, ಬಸವರಾಜ ಮುದಗಲ್ಲ, ಎನ್. ಜೆ. ಪಟ್ಟದಕಲ್ಲ, ಸಂಕಣ್ಣ ಹಾದಿಮನಿ, ದೊಡ್ಡಪ್ಪ ಮೂಲಿಮನಿ, ಶಂಕ್ರಪ್ಪ ತೊಂಡಿಹಾಳ, ಮೋಹನಸಿಂಗ್ ಗಂಗಾವತಿ, ತಿಮ್ಮಣ್ಣ ಗಣಪಾ, ಏಕನಾಥ ರೇವಣಕಿ, ನಾರಾಯಣಪ್ಪ ಕಂಗೂರಿ, ಶ್ರೀನಿವಾಸ ಕರಿ, ಕಲ್ಮೇಶಯ್ಯ ಹಿರೇಮಠ, ಲಕ್ಷ್ಮೀಬಾಯಿ ಹುಬ್ಬಳ್ಳಿ, ಮಹಾದೇವಿ ಸಿನ್ನೂರ ಮುಂತಾದವರು ಭಾಗವಹಿಸಿದ್ದರು.

# ಸಮೀಕ್ಷಾ ಅವಧಿ ಮೇ 28ರವರೆಗೆ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ನ್ಯಾಯಮೂರ್ತಿ ಹೆಚ್. ಎನ್. ನಾಗಮೋಹನದಾಸ್ ಅವರ ಏಕ ಸದಸ್ಯ ವಿಚಾರಣಾ ಆಯೋಗದಿಂದ ಪರಿಶಿಷ್ಟ ಜಾತಿ ಒಳ ಮೀಸಲಾತಿ ಕುರಿತು ದತ್ತಾಂಶಗಳನ್ನು ಸಂಗ್ರಹಿಸುವ ಕಾರ್ಯವನ್ನು ಮೇ 5ರಿಂದ ಪ್ರಾರಂಭಿಸಲಾಗಿದೆ. ಈ ಸಮೀಕ್ಷಾ ಅವಧಿಯನ್ನು ಮೇ 28ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಹೇಳಿದರು.



ಸೋಮವಾರ ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೇ 25ರವರೆಗೆ ಗಣತಿದಾರರಿಂದ ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ನಡೆಸಿ ದತ್ತಾಂಶ ಸಂಗ್ರಹಣೆಯನ್ನು ಮಾಡಲಾಗುತ್ತದೆ. ಮೇ 26ರಿಂದ ಮೇ 28ವರೆಗೆ ಮತಗಟ್ಟೆ ಪ್ರದೇಶದಲ್ಲಿ ಆಯೋಜಿಸಿರುವ ವಿಶೇಷ ಶಿಬಿರಗಳಲ್ಲಿ ಪರಿಶಿಷ್ಟ ಜಾತಿ ಜನಾಂಗದವರು ತಮ್ಮ ಜಾತಿಯ ಕುರಿತು ಮಾಹಿತಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಯಾರೂ ಕೂಡ ಸಮೀಕ್ಷೆಯಿಂದ ದೂರ ಉಳಿಯದಂತೆ, ಅರ್ಹರು ಭಾಗವಹಿಸಿ ಸಮೀಕ್ಷೆ ಉದ್ದೇಶ ಸಫಲಗೊಳ್ಳುವಂತೆ ಕ್ರಮ ಕೈಗೊಳ್ಳಲಾಗಿದೆ ಎಂದರು.

ಸಮೀಕ್ಷೆಯಲ್ಲಿ ಭಾಗವಹಿಸಲು ಸಾಧ್ಯವಾಗದವರು ಮತ್ತು ದೂರದ ಊರುಗಳಲ್ಲಿ ಇರುವವರು ಮೇ.19ರಿಂದ ಮೇ28ರವರೆಗೆ ಆನ್‌ಲೈನ್ https://schedulecastesurvey.karnataka.gov.in/self-declaration ತಾಣದ ಮೂಲಕ ಮೂಲಕ ಸ್ವಯಂ ಘೋಷಣೆ ಮಾಡಿಕೊಳ್ಳಬಹುದಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾಹಿತಿ ನೀಡಿದರು.

# ಅಧಿಕ ರಕ್ತದೊತ್ತಡವನ್ನು ನಿರ್ಲಕ್ಷಿಸದಿರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅಧಿಕ ರಕ್ತದೊತ್ತಡವನ್ನು ಸಾಮಾನ್ಯವಾಗಿ ಬಿಪಿ ಎಂದು ಕರೆಯುತ್ತೇವೆ. ಇದು ನಮ್ಮ ಕಾಲದ ಒಂದು ಪ್ರಮುಖ ಆರೋಗ್ಯ ಸಮಸ್ಯೆಯಾಗಿ ಬೆಳೆದಿದೆ. ಇದು ಜಾಗತಿಕವಾಗಿ ಲಕ್ಷಾಂತರ ಜನರ ಮೇಲೆ ಪರಿಣಾಮ ಬೀರುವ ಕಾಯಿಲೆಯಾಗಿದೆ ಮತ್ತು ಇದು ಹೃದಯಾಘಾತ, ಪಾರ್ಶ್ವವಾಯು, ಮೂತ್ರಪಿಂಡ ವೈಫಲ್ಯದಂತಹ ಗಂಭೀರ ಪರಿಣಾಮಗಳಿಗೆ ಕಾರಣವಾಗಬಹುದು ಎಂದು ಪ್ರಾಂಶುಪಾಲ ಅಮರಯ್ಯ ಚಿನ್ನಯ್ಯನಮಠ ತಿಳಿಸಿದರು.




ಇಲ್ಲಿನ ವಿ.ಪಿ. ಗಾಲಾ ನರ್ಸಿಂಗ್ ಹಾಗೂ ಪ್ಯಾರಾಮೆಡಿಕಲ್ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ವಿಶ್ವ ಅಧಿಕ ರಕ್ತದೊತ್ತಡ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಿಯಮಿತವಾಗಿ ನಮ್ಮ ರಕ್ತದೊತ್ತಡವನ್ನು ಪರೀಕ್ಷಿಸಿಕೊಳ್ಳಬೇಕು. ವೈದ್ಯರನ್ನು ಭೇಟಿ ಮಾಡಿ ಅಥವಾ ಮನೆಯಲ್ಲಿಯೇ ರಕ್ತದೊತ್ತಡ ಮಾನಿಟರ್ ಬಳಸಿ ನಮ್ಮ ಬಿಪಿ ಮಟ್ಟವನ್ನು ತಿಳಿದುಕೊಳ್ಳುವುದು ಬಹಳ ಮುಖ್ಯ. ಒಂದು ವೇಳೆ ಅಧಿಕ ರಕ್ತದೊತ್ತಡ ಇರುವುದು ದೃಢಪಟ್ಟರೆ, ವೈದ್ಯರ ಸಲಹೆಯಂತೆ ಸೂಕ್ತ ಚಿಕಿತ್ಸೆ ಮತ್ತು ಔಷಧಿಗಳನ್ನು ತೆಗೆದುಕೊಳ್ಳಬೇಕು. ಅಧಿಕ ರಕ್ತದೊತ್ತಡವನ್ನು ನಿರ್ಲಕ್ಷಿಸುವುದು ನಮ್ಮ ಆರೋಗ್ಯಕ್ಕೆ ಮಾರಕವಾಗಬಹುದು ಎಂದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಅಧ್ಯಕ್ಷರಾದ ರಚನಾ ಗಾಲಾ, ಸೆಕ್ರೆಟರಿ ಪಂಕಜ್ ಗಾಲಾ, ನಿರ್ದೇಶಕ ಗುಂಜನ ಗಾಲಾ ಹಾಜರಿದ್ದರು.

### ಎಸ್.ವೈ.ಬಿ.ಎಂ.ಎಸ್ ಯೋಗ ಪಾಠಶಾಲೆಯ ಸುವರ್ಣ ಮಹೋತ್ಸವ ಸಮಾರಂಭ ಉದ್ಘಾಟಿಸಿದ ಡಿ.ಆರ್. ಪಾಟೀಲ ಅಭಿಮತ

# ಭಾರತೀಯ ಯೋಗವು ನಿಸ್ವಾರ್ಥ ಸೇವೆಯ ಸಂಕೇತ

**■ವಿಜಯಸಾಕ್ಷಿ ಸುದ್ದಿ, ಗದಗ**

ಇತ್ತೀಚಿನ ದಿನಗಳಲ್ಲಿ ಪಾಶ್ಚಾತ್ಯರು ಯೋಗದ ಬೇಡಿಕೆ ಕಂಡು ಅದನ್ನು ವ್ಯಾಪಾರೀಕರಣಗೊಳಿಸಿದ್ದಾರೆ. ಆದರೆ, ಭಾರತವು ಜಗತ್ತಿಗೆ ನೀಡಿದ ಅಗ್ರಗಣ್ಯ ಕೊಡುಗೆಯಾಗಿರುವ ಯೋಗವು ಮೂಲತಃ ನಿಸ್ವಾರ್ಥ ಸೇವೆಯ ಸಂಕೇತವಾಗಿದೆ ಎಂದು ಮಾಜಿ ಶಾಸಕ ಡಿ.ಆರ್. ಪಾಟೀಲ ನುಡಿದರು.

ಅವರು ಸೋಮವಾರ ಇಲ್ಲಿನ ಜಗದ್ಗುರು ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ ಶಿವಾನುಭವ ಮಂಟಪದಲ್ಲಿ ಶ್ರೀ ಮನ್ನಿರಂಜನ ಯಳಂದೂರು ಬಸವಲಿಂಗ ಮಹಾಸ್ವಾಮಿಗಳವರ ಸ್ಮಾರಕ ಯೋಗ ಪಾಠಶಾಲೆಯ ಸುವರ್ಣ ಮಹೋತ್ಸವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಈ ಯೋಗ ಪಾಠಶಾಲೆಯ ಸುವರ್ಣ ಮಹೋತ್ಸವದ ಶುಭ ಸಂದರ್ಭದಲ್ಲಿ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳನ್ನು ಸ್ಮರಿಸಬೇಕಿದೆ. ಸಾಮಾಜಿಕ ಸ್ವಾಸ್ಥ್ಯ ಕಾಪಾಡಿಕೊಳ್ಳಲು ಯೋಗ ಹಾಗೂ ಆಯುರ್ವೇದದಂಥಹ ಪಾರಂಪರಿಕ ಚಿಕಿತ್ಸಾ ಪದ್ಧತಿಗಳ ಅನಿವಾರ್ಯತೆ ಇದೆ.

ಇಷ್ಟು ದಿನ ದೈಹಿಕ ಬಳಲುವಿಕೆಗಾಗಿ ಮಾತ್ರ ಯೋಗ ಚಿಕಿತ್ಸಕ ಎಂದು ನಂಬಲಾಗಿತ್ತು. ಆದರೆ ಇತ್ತೀಚೆಗೆ ಯೋಗದ ಮಾನಸಿಕ ಹಾಗೂ ಆಧ್ಯಾತ್ಮಿಕ ಲಾಭಗಳ ಮಜಲುಗಳು ಅನಾವರಣಗೊಂಡಿವೆ. ಯೋಗ ಪಾಠಶಾಲೆಯು 50 ವಸಂತಗಳನ್ನು ಪೂರೈಸಿರುವುದು ಸಂತಸದ ಸಂಗತಿಯಾಗಿದ್ದು, ಕೆ.ಎಸ್. ಪಲ್ಲೇದ ಅವರ ಪರಿಶ್ರಮ ಹಾಗೂ ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರ ಮಾರ್ಗದರ್ಶನದಲ್ಲಿ ಈ ಸಂಸ್ಥೆ ಇನ್ನೂ ಉತ್ತರೋತ್ತರವಾಗಿ ಬೆಳೆಯಲಿ ಎಂದು ಹಾರೈಸಿದರು.



ಕ.ವಿ.ವಿ ಯೋಗ ಅಧ್ಯಯನ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಪ್ರೊ. ಲಕ್ಷ್ಮಣಕುಮಾರ ಸಣ್ಣೆಲ್ಲಪ್ಪನವರ ಅವರ ಕುರಿತಾದ 'ದಿ ಯೋಗಾ ಏಂಜೆಲ್' ಅಭಿನಂದನಾ ಗ್ರಂಥವು ಲೋಕಾರ್ಪಣೆಗೊಳಿಸಿದ ಆನೆಗುಂದಿ ಸಂಸ್ಥಾನದ ವಿಜಯನಗರ ಸಾಮ್ರಾಜ್ಯದ ಅರವೀಡು ರಾಜವಂಶಸ್ಥರಾದ ರಾಜಾ ಶ್ರೀಕೃಷ್ಣದೇವರಾಯರು ಮಾತನಾಡಿ, ತೋಂಟದಾರ್ಯ ಮಠವು ಸಮಾಜಕ್ಕೆ ನೀಡಿದ ಕೊಡುಗೆ ಅನನ್ಯವಾಗಿದ್ದು, ಅದರ ಅಂಗವಾದ ಈ ಯೋಗಪಾಠಶಾಲೆಯು ಸುವರ್ಣ ಮಹೋತ್ಸವ ಆಚರಿಸಿಕೊಳ್ಳುತ್ತಿರುವುದು ಹೆಮ್ಮೆಯ ವಿಷಯವಾಗಿದೆ. ಯೋಗಕ್ಕಾಗಿ ತಮ್ಮ ಜೀವನವನ್ನು ಸಮರ್ಪಿಸಿರುವ ಶ್ರೀಯುತ ಸಣ್ಣೆಲ್ಲಪ್ಪನವರ ಅವರ ಕುರಿತ ಗ್ರಂಥ ಬಿಡುಗಡೆಗೊಳಿಸಿರುವುದು ಸಂತಸ ನೀಡಿದ್ದು, ಭಾರತದ ಅಮೂಲ್ಯ ಪರಂಪರೆಯ ಕೊಂಡಿಯಾಗಿರುವ ಯೋಗವನ್ನು ಉಳಿಸಿ-ಬೆಳೆಸುವ ಹೊಣೆ ನಮ್ಮೆಲ್ಲರದ್ದಾಗಿದೆ ಎಂದರು.

ಬೆಂಗಳೂರಿನ ಮಣಿಪಾಲ ಆಸ್ಪತ್ರೆಯ ನರರೋಗ ತಜ್ಞರಾದ ಡಾ. ಸಂತೋಷ ಎನ್.ಎಸ್ ಯೋಗ ಹಾಗೂ ಧ್ಯಾನದ ಕುರಿತು ವಿಶೇಷ ಉಪನ್ಯಾಸ ನೀಡಿ, ಇತ್ತೀಚೆಗೆ ಯುವಜನರ ಜೀವನಶೈಲಿಯಿಂದ ರೋಗಗಳು ಸಾಮಾನ್ಯವಾಗಿದ್ದು, ಯೋಗ-ಧ್ಯಾನದಿಂದ ಇಂಥಹ ಉಪದ್ರವಗಳನ್ನು ನಿವಾರಿಸಬಹುದು. ಭಗವದ್ಗೀತೆಯಲ್ಲೂ ಯೋಗದ ಉಲ್ಲೇಖವಿದ್ದು, ಮನಸ್ಸಿನ ದುಗುಡಗಳು-ತಲ್ಲಣಗಳನ್ನು ನಿವಾರಿಸಿ ನೆಮ್ಮದಿಯುತ ಜೀವನ ನಡೆಸಲು ಯೋಗ-ಧ್ಯಾನಗಳು ದಿವ್ಯ ಔಷಧಗಳಾಗಿವೆ ಎಂದರು.

ಹುಬ್ಬಳ್ಳಿ ಕೆ.ಎಲ್.ಇ ತಾಂತ್ರಿಕ ಮಹಾವಿದ್ಯಾಲಯದ ಎಕ್ಸಿಕ್ಯೂಟಿವ್ ಡೀನ್ ಪ್ರೊ. ಬಿ.ಎಲ್. ದೇಸಾಯಿ ಮಾತನಾಡಿದರು. ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಸಂಡೂರಿನ ವಿರಕ್ತಮಠದ ಪ್ರಭು ಮಹಾಸ್ವಾಮಿಗಳು ಸಮ್ಮುಖ ವಹಿಸಿದ್ದರು. ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿಗಳಾದ ಎಸ್.ಎಸ್. ಪಟ್ಟಣಶೆಟ್ಟರ ಸ್ವಾಗತಿಸಿದರು. ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಯೋಗ ಪಾಠಶಾಲೆಯ ಯೋಗಸಾಧಕರು, ವಿದ್ಯಾರ್ಥಿಗಳಿಂದ ಯೋಗ ಪ್ರದರ್ಶನ ಜರುಗಿತು. ಯೋಗಾಚಾರ್ಯ ಕೆ.ಎಸ್. ಪಲ್ಲೇದ, ಡಾ. ಮಲ್ಲಿಕಾರ್ಜುನ ಐಹೊಳಿ, ಎಂ.ಎಸ್. ಶಿರಿಯಣ್ಣವರ, ಡಾ. ವಿ.ಎಂ. ಮುಂದಿನಮನಿ, ಐ.ಬಿ. ಕೊಟ್ಟೂರಶೆಟ್ಟರ, ಕೆಯುಡಿ ಡೀನ್ ಎಂ.ಪಿ. ರಮೇಶ, ಎ.ಇ.ಕಾಂ ತಾಂತ್ರಿಕ ನಿರ್ದೇಶಕರಾದ ಶ್ರೀಕಂಠ ಚೌಕಿಮಠ, ಚಂದ್ರಮೌಳಿ ನಾಯ್ಕರ್, ಶೇಖಣ್ಣ ಕವಳಿಕಾಯಿ, ಸಂಗಮೇಶ ಮೇಲ್ಮುರಿ, ಅಮರೇಶ ಅಂಗಡಿ, ಐ.ಬಿ. ಬೆನಕೊಪ್ಪ, ಡಾ. ಧನೇಶ ದೇಸಾಯಿ, ಎಂ.ಎಸ್. ಅಂಗಡಿ, ವಿನೋದ ಚಪ್ಪರಳ್ಳಿಮಠ ಸೇರಿದಂತೆ ಯೋಗಪಾಠಶಾಲೆಯ ವಿದ್ಯಾರ್ಥಿಗಳು, ಯೋಗಾಸಕ್ತರು ಹಾಜರಿದ್ದರು.

'ಯೋಗ ದೀಪ್ತಿ' ಸ್ಮರಣ ಸಂಚಿಕೆಯನ್ನು ಬಿಡುಗಡೆಗೊಳಿಸಿದ ವಿಧಾನ ಪರಿಷತ್ ಸದಸ್ಯರಾದ ಎಸ್.ವ್ಹಿ. ಸಂಕನೂರ ಮಾತನಾಡಿ, ಯೋಗ ಈ ದೇಶದ ಆಸ್ತಿಯಾಗಿದ್ದು, ಈ ಹಿಂದೆ ಭಾರತಕ್ಕೆ ಸೀಮಿತವಾಗಿದ್ದ ಯೋಗವು ಇಂದು ಪ್ರಧಾನಿಗಳ ವಿಶೇಷ ಆಸಕ್ತಿಯಿಂದ ವಿಶ್ವಮಾನ್ಯತೆ ಪಡೆದುಕೊಂಡಿದೆ. ಇಂದಿನ ದಿನಗಳಲ್ಲಿ ಎಲ್ಲರೂ ಒತ್ತಡದಲ್ಲಿ ಬದುಕುವ ವಿಷಮ ಪರಿಸ್ಥಿತಿ ನಿರ್ಮಾಣವಾಗಿದ್ದು, ದಿನನಿತ್ಯ ಕನಿಷ್ಠ ಅರ್ಧಗಂಟೆ ಯೋಗಾಭ್ಯಾಸ ಮಾಡುವುದರಿಂದ ಆರೋಗ್ಯಭಾಗ್ಯ ವೃದ್ಧಿಸಿಕೊಳ್ಳಲು ಸಾಧ್ಯ ಎಂದರು.

### ನಿಡಗುಂದಿಯ ಶ್ರೀ ಹನುಮಂತ ದೇವಸ್ಥಾನದಲ್ಲಿ ಹನುಮಾನ್ ಚಾಲೀಸಾ ಪಠಣದ ಮುಕ್ತಾಯ ಸಮಾರಂಭ

# ಹಿಂದೂ ಸಂಸ್ಕೃತಿಯನ್ನು ಉಳಿಸಿ, ಬೆಳೆಸಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಇಂದಿನ ದಿನಗಳಲ್ಲಿ ಬಹುತೇಕ ಎಲ್ಲರೂ ಹಿಂದೂ ಸಂಸ್ಕೃತಿಯನ್ನು ಮರೆತು ಪಾಶ್ಚಾತ್ಯ ಸಂಸ್ಕೃತಿಯೆಡೆಗೆ ವಾಲುತ್ತಿರುವುದು ಅತ್ಯಂತ ಶೋಚನೀಯ ಸಂಗತಿ. ಇನ್ನಾದರೂ ನಾವು ಪಾಶ್ಚಾತ್ಯ ಸಂಸ್ಕೃತಿಯನ್ನು ಅಳಿಸಿ, ಹಿಂದೂ ಸಂಸ್ಕೃತಿಯನ್ನು ಉಳಿಸಿ ಬೆಳೆಸುವತ್ತ ಹೆಚ್ಚಿನ ಗಮನ ನೀಡಬೇಕಿದೆ ಎಂದು ಹೆಬ್ಬಳ್ಳಿ ಚೈತನ್ಯಾಶ್ರಮದ ಶ್ರೀ ದತ್ತಾವಧೂತರು ಹೇಳಿದರು.

ಸಮೀಪದ ನಿಡಗುಂದಿಯ ಶ್ರೀ ಹನುಮಂತ ದೇವಸ್ಥಾನದಲ್ಲಿ ಜರುಗಿದ 11 ತಾಸುಗಳ ಹನುಮಾನ್ ಚಾಲೀಸಾ ಪಠಣದ ಮುಕ್ತಾಯ ಸಮಾರಂಭದಲ್ಲಿ ಅವರು ಆಶೀರ್ವಚನ ನೀಡಿದರು.



ಜೀವನದಲ್ಲಿ ಇಲ್ಲದ ನೆಮ್ಮದಿಯನ್ನು ಹುಡುಕಲು ನಾವು ಪ್ರಯತ್ನಿಸುತ್ತೇವೆ. ಆಧ್ಯಾತ್ಮವಿಲ್ಲದೆ ನೆಮ್ಮದಿಗೆ ಅರ್ಥವೇ ಇಲ್ಲ. ಜೀವನದಲ್ಲಿ ಆಧ್ಯಾತ್ಮವನ್ನು ಅಳವಡಿಸಿಕೊಂಡರೆ ಮನಸ್ಸಿಗೆ ನೆಮ್ಮದಿಯ ಜೊತೆಗೆ ನಮ್ಮ ಸಂಸ್ಕೃತಿಯ ಪರಿಚಯವಾಗುತ್ತದೆ. ನಮ್ಮತನವನ್ನು ಮರೆತು ನಾವು ಇನ್ನಾವುದೋ ಸಂಸ್ಕೃತಿಯನ್ನು ಅಳವಡಿಸಿಕೊಳ್ಳಲು ಮುಂದಾಗುತ್ತಿರುವುದು ನಮ್ಮ ವಿನಾಶವನ್ನು ತೋರಿಸುತ್ತದೆ. ನಾವು ವಿನಾಶದಿಂದ ಅವಿನಾಶದತ್ತ ಸಾಗಲು ನಮಗೆ ಆಧ್ಯಾತ್ಮ ಸಹಾಯ ಮಾಡುತ್ತದೆ ಎಂದರು.

ಹನುಮಂತ ಶಕ್ತಿಶಾಲಿ ದೇವರು. ಹನುಮಂತನನ್ನು ಪೂಜಿಸುವುದರಲ್ಲಿ ಭಾರತ ದೇಶದಲ್ಲಿ ಯಾವುದೇ ಭೇದಭಾವವಿಲ್ಲ. ರಾಮಾಯಣದಲ್ಲಿ ಶ್ರೀರಾಮನನ್ನು ಬಿಟ್ಟರೆ ಮತ್ತೊಂದು ಮಹತ್ವದ, ಶಕ್ತಿಯುತ ಪಾತ್ರವೆಂದರೆ ಅದು ಹನುಮಂತ.

ಹನುಮಂತನ ಸ್ಮರಣೆಯಿಂದ ನಮ್ಮ ಅನೇಕ ದೋಷಗಳು ದೂರವಾಗುತ್ತವೆ. ಆದ್ದರಿಂದ ನಾವೀಗ ಹನುಮಾನ್ ಚಾಲೀಸಾ ಪಠಣವನ್ನು ಎಲ್ಲೆಡೆಗೆ ಹಮ್ಮಿಕೊಳ್ಳುತ್ತಿದ್ದೇವೆ. ಇಲ್ಲಿ ಜಾತಿ, ಮತ, ಪಂಥದ ಭೇದಭಾವವಿಲ್ಲ. ಯಾರು ಬೇಕಾದರೂ ಬಂದು ಈ ಪಠಣೆಯಲ್ಲಿ ಪಾಲ್ಗೊಂಡು ಪುಣ್ಯ ವಿಶೇಷವನ್ನು ಗಳಿಸಿಕೊಳ್ಳಬಹುದೆಂದರು.

ಹನುಮಾನ್ ಚಾಲೀಸಾ ಪಠಣದಲ್ಲಿ ರಂಗಣ್ಣ ಕುಲಕರ್ಣಿ ಪರಿವಾರದವರು, ರೋಣ, ನರೇಗಲ್ಲ, ಗಜೇಂದ್ರಗಡ ಮತ್ತು ಸುತ್ತಲಿನ ಗ್ರಾಮಗಳ ಅನೇಕ ಭಕ್ತರು ಪಾಲ್ಗೊಂಡಿದ್ದರು. ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ನಿಡಗುಂದಿಯಲ್ಲಿನ ಹನುಮಾನ್ ಮಂದಿರ ನಮಗೆ ಪರಿಚಯವಾದದ್ದು ಭಕ್ತರಾದ ರಂಗಣ್ಣ ಕುಲಕರ್ಣಿಯವರಿಂದ. ಮೊದಲ ದಿನವೇ ನಮಗೆ ಇದನ್ನೊಂದು ಭವ್ಯ ಹನುಮಾನ್ ಮಂದಿರ ಮಾಡಬೇಕೆಂಬ ಇಚ್ಛೆಯಾಗಿದೆ. ಅದಕ್ಕೆ ಸಮಯ ಕೂಡಿ ಬಂದರೆ ಖಂಡಿತ ಈ ಹನುಮಾನ್ ಮಂದಿರ ಈ ಭಾಗದಲ್ಲಿನ ವಿಶೇಷತೆಯುಳ್ಳ ಹನುಮಾನ್ ಮಂದಿರವಾಗಲಿದೆ. ಅದಕ್ಕೆ ಪೂರಕವಾಗಿ ಇಂತಹ ಕಾರ್ಯಕ್ರಮಗಳನ್ನು ಇಲ್ಲಿ ಹಮ್ಮಿಕೊಳ್ಳುತ್ತಿದ್ದೇವೆ ಎಂದು ಶ್ರೀ ದತ್ತಾವಧೂತರು ಹೇಳಿದರು.

# ಕುಷ್ಟಗಿ-ಹುಬ್ಬಳ್ಳಿ ರೈಲ್ವೆಗೆ ಹಸಿರು ನಿಶಾನೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಸಮೀಪದ ಹರ್ಲಾಪೂರ ರೈಲ್ವೆ ನಿಲ್ದಾಣದಲ್ಲಿ ಕುಷ್ಟಗಿಯಿಂದ ಹುಬ್ಬಳ್ಳಿವರೆಗೆ ಸಂಚರಿಸುವ ದೈನಂದಿನ ಎಕ್ಸ್‌ಪ್ರೆಸ್ ರೈಲು ಗಾಡಿಗೆ (17328) ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವಿ.ಆರ್. ನಾರಾಯಣ ರೆಡ್ಡಿ ಬಣದ ವತಿಯಿಂದ ಪೂಜೆ ಸಲ್ಲಿಸಿ, ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ, ರೈತ ಸಂಘದ ಗ್ರಾಮ ಘಟಕದ ಅಧ್ಯಕ್ಷ ಹುಚ್ಚೀರಪ್ಪ ಜೋಗಿನ ಮತ್ತು ಸದಸ್ಯರು ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಅಂದಪ್ಪ ಕೂಳೂರು ಮಾತನಾಡಿ, ಈ ರೈಲ್ವೆ ಗಾಡಿ ನಿಲುಗಡೆಯಿಂದ ಬೆಳಿಗ್ಗೆ ಹುಬ್ಬಳ್ಳಿ-ಧಾರವಾಡ ನಗರಗಳಿಗೆ ತೆರಳುವ ತಿಮ್ಮಾಪೂರ, ಹರ್ಲಾಪೂರ, ಲಕ್ಕುಂಡಿ, ಯರೆಹಂಚಿನಾಳ, ಬಿನ್ನಾಳ ಗ್ರಾಮದ ಸಾರ್ವಜನಿಕರು, ವಿದ್ಯಾರ್ಥಿಗಳು, ವ್ಯಾಪಾರಸ್ಥರು, ಕೂಲಿ ಕಾರ್ಮಿಕರು ಹಾಗೂ ನೌಕರರಿಗೆ ಅನುಕೂಲವಾಗಲಿದೆ ಎಂದು ಹೇಳಿದರು. ಯಲ್ಲಪ್ಪ ಎಚ್.ಬಾಬರಿ ಮಾತನಾಡಿ, ಈ ರೈಲು ಗಾಡಿ ನಿಲುಗಡೆಗೆ ಸಹಕರಿಸಿದ ಸಚಿವರಾದ ವಿ. ಸೋಮಣ್ಣ ಹಾಗೂ ರೈಲ್ವೆ ಹಿರಿಯ ಅಧಿಕಾರಿಗಳಿಗೆ ರೈತ ಸಂಘದಿಂದ ಅಭಿನಂದನೆ ಸಲ್ಲಿಸುತ್ತೇವೆ ಎಂದರು.

ಹಾವೇರಿ-ಗದಗ ಸಂಸದರಾದ ಬಸವರಾಜ ಬೊಮ್ಮಾಯಿ ಅವರು ಮುಂದಿನ ದಿನಮಾನಗಳಲ್ಲಿ ಹಂಪಿ ಎಕ್ಸ್‌ಪ್ರೆಸ್ ಹಾಗೂ ತಿರುಪತಿ ಎಕ್ಸ್‌ಪ್ರೆಸ್ ರೈಲುಗಾಡಿಗಳನ್ನು ಹರ್ಲಾಪೂರ ರೈಲ್ವೆ ಸ್ಟೇಷನ್‌ನಲ್ಲಿ ನಿಲುಗಡೆಗೆ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ರೈತ ಸಂಘದ ಗ್ರಾಮ ಘಟಕದ ಸದಸ್ಯರಾದ ಮಲ್ಲಿಕಾರ್ಜುನ ಇದ್ಲಿ, ಶರಣಪ್ಪ ಜೋಗಿನ, ಬಾಳಪ್ಪ ಗಂಗರಾತ್ರಿ, ಮಲ್ಲಪ್ಪ ಮಾಳಗುಡರ, ಹನುಮಪ್ಪ ಪೂಜಾರ, ಸುರೇಶ್ ಬಿಸನಳ್ಳಿ, ಈರಪ್ಪ ಲಕ್ಕುಂಡಿ, ಬಸಪ್ಪ ಗುಡ್ಲಾನೂರ, ಮಾರುತಿ ಕಣ್ಣೂರು, ಕೆ.ಜಿ. ಕಟ್ಟಿಮನಿ, ಅಶೋಕ ಗದಗ, ರೈಲ್ವೇ ಸ್ಟೇಷನ್ ಮಾಸ್ಟರ್ ರವಿಂದ್ರ ಪ್ರಸಾದ, ಸಿಬ್ಬಂದಿ ಹನುಮಂತ ಜೋಗಿನ ಮಂಜುನಾಥ ದಳವಾಯಿ ಮುಂತಾದವರಿದ್ದರು.

# ವಿಜಯ್ ಶಾ ವಿರುದ್ಧ ಕಾನೂನು ಕ್ರಮಕ್ಕೆ ಆಗ್ರಹ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಲ್ ಸೋಫಿಯಾ ಅವರು 'ಆಪರೇಷನ್ ಸಿಂಧೂರ'ದ ನಂತರ ಪ್ರಸಿದ್ಧಿ ಪಡೆದಿರುವುದು ಸಮಸ್ತ ಭಾರತೀಯ ನಾಗರಿಕರು, ಮುಸ್ಲಿಂ ಸಮುದಾಯದವರು ಹೆಮ್ಮೆ ಪಡುವ ಸಂಗತಿಯಾಗಿದೆ. ಆದರೆ, ಮಧ್ಯಪ್ರದೇಶದ ಬುಡಕಟ್ಟು ವ್ಯವಹಾರಗಳ ಸಚಿವ ವಿಜಯ್ ಶಾ ಇತ್ತೀಚೆಗೆ ಸೋಫಿಯಾ ಖುರೇಷಿ ಅವರ ಧರ್ಮವನ್ನು ಉಲ್ಲೇಖಿಸಿ ಹೇಳಿಕೆ ನೀಡಿರುವುದು ಖಂಡನೀಯ ಎಂದು ನಗರಸಭೆ ಸದಸ್ಯ, ವಿರೋಧ ಪಕ್ಷದ ಉಪ ನಾಯಕ ಜನಾಬ ಬರಕತ ಅಲಿ



ಮುಲ್ಲಾ ಕೇಂದ್ರ ಸರಕಾರವನ್ನು ಒತ್ತಾಯಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ರಾಜ್ಯ ಸಚಿವೆ ಸಾವಿತ್ರಿ ಠಾಕೂರ್, ಶಾಸಕಿ, ಮಾಜಿ ಕ್ಯಾಬಿನೆಟ್ ಸಚಿವೆ ಉಷಾ ಠಾಕೂರ್ ಮತ್ತು ಬಿಜೆಪಿ ಮುಖಂಡರ ಎದುರಲ್ಲೇ ಅವರು ಈ ಮಾತುಗಳನ್ನಾಡಿದ್ದರು. ಇಂತಹ ಕೋಮು ಸೌಹಾರ್ದತೆಯನ್ನು ಕದಡುವ, ಅಸಂಬದ್ಧ ಹೇಳಿಕೆಗಳನ್ನು ತಮ್ಮದೇ ಪಕ್ಷದ ರಾಜಕೀಯ ನಾಯಕರ ಸಮ್ಮುಖದಲ್ಲಿಯೇ ನೀಡಿದ ಸಚಿವ ವಿಜಯ್ ಶಾರನ್ನು ಕೂಡಲೇ ಅಮಾನತುಗೊಳಿಸಿ, ಅವರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕೆಂದು ಆಗ್ರಹಿಸಿದ್ದಾರೆ.



ಶಿವಮೊಗ್ಗ ಜಿಲ್ಲೆಯ ನೆಹರು ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘ ಏರ್ಪಡಿಸಿರುವ ರಾಜ್ಯಮಟ್ಟದ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಶಿಕ್ಷಣ ಸಚಿವ ಮಧು ಬಂಗಾರಪ್ಪ ರವಿವಾರ

ಉದ್ಘಾಟಿಸಿದರು. ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ, ನಿಕಟಪೂರ್ವ ಅಧ್ಯಕ್ಷ ರವಿ ಗುಂಜೀಕರ, ಗದಗ ಜಿಲ್ಲಾ ಸರಕಾರಿ ನೌಕರ ಸಂಘದ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ ಸೇರಿದಂತೆ ಹಲವರಿದ್ದರು.

# ಹೃದಯ ವಿದ್ರಾವಕ ಘಟನೆ: ಕಾರಿನಲ್ಲೇ ಉಸಿರುಗಟ್ಟಿ ನಾಲ್ವರು ಮಕ್ಕಳು ಸಾವು!

**■ವಿಜಯಸಾಕ್ಷಿ ಸುದ್ದಿ, ಅಮರಾವತಿ**

ಆಂಧ್ರಪ್ರದೇಶದ ವಿಜಯನಗರಂ ಜಿಲ್ಲೆಯ ದ್ವಾರಪುಡಿ ಗ್ರಾಮದಲ್ಲಿ ಕಾರಿನಲ್ಲೇ ನಾಲ್ವರು ಮಕ್ಕಳು ಉಸಿರುಗಟ್ಟಿ ಸಾವನ್ನಪ್ಪಿದ್ದಾರೆ.

ಮೃತರನ್ನು ಮಂಗಿ ಉದಯ್ (8), ಬುರ್ಲೆ ಚಾರುಮತಿ (8), ಬುರ್ಲೆ ಚರಿಷ್ಮಾ (6) ಮತ್ತು ಕಂಡಿ ಮನಸ್ವಿನಿ (6) ಮೃತ ಮಕ್ಕಳು. ವ್ಯಕ್ತಿಯೊಬ್ಬ ಕಾರು ನಿಲ್ಲಿಸಿ, ಲಾಕ್ ಮಾಡುವುದನ್ನೇ ಮರೆತು ಹೋಗಿದ್ದ. ಅಲ್ಲೇ ಆಟವಾಡುತ್ತಿದ್ದ ನಾಲ್ವರು ಮಕ್ಕಳು ಮಳೆಯಿಂದ ತಪ್ಪಿಸಿಕೊಳ್ಳಲು ಪಕ್ಕದಲ್ಲೇ ನಿಲ್ಲಿಸಿದ್ದ ಕಾರನ್ನು ಹತ್ತಿದ್ದಾರೆ.

ದುರಾದೃಷ್ಟವಶಾತ್, ಕಾರಿನ ಬಾಗಿಲು ಆಕಸ್ಮಿಕವಾಗಿ ಲಾಕ್ ಆಗಿ, ನಾಲ್ವರು ಮಕ್ಕಳು ಕಾರಿನಲ್ಲೇ ಉಸಿರುಗಟ್ಟಿ ಸಾವನ್ನಪ್ಪಿದ್ದಾರೆ.

ಮಕ್ಕಳಿಗಾಗಿ ಮನೆಯವರು ಸುಮಾರು 3 ಗಂಟೆಗಳ ಕಾಲ ಹುಡುಕಾಟ ನಡೆಸಿದ್ದರು.

ಕೊನೆಗೆ ಅಲ್ಲೇ ನಿಲ್ಲಿಸಿದ್ದ ಕಾರನ್ನು ಗಮನಿಸಿದಾಗ ಮಕ್ಕಳು ಕಾರಿನೊಳಗೆ ಸಿಲುಕಿರುವುದು ಪತ್ತೆಯಾಗಿದೆ. ತಕ್ಷಣವೇ ಕಾರಿನ ಗ್ಲಾಸ್ ಒಡೆದು ಮನೆಯವರು ಮಕ್ಕಳನ್ನು ಹೊರತೆಗೆದರು. ಅಷ್ಟರಲ್ಲಾಗಲೇ ನಾಲ್ವರು ಉಸಿರುಗಟ್ಟಿ ಸಾವನ್ನಪ್ಪಿದ್ದರು.

# ಎಸ್‌ಡಿಎಂಸಿ ಅಧ್ಯಕ್ಷರಿಂದ ಅಧಿಕಾರ ದುರಪಯೋಗ ಆರೋಪ



**■ವಿಜಯಸಾಕ್ಷಿ ಸುದ್ದಿ, ಡಂಬಳ**

ಡಂಬಳ ಹೋಬಳಿಯ ಪೇಠಾ-ಆಲೂರ ಗ್ರಾಮದ ಎಂಸಿಎಸ್ ಶಾಲೆಯ ಕಟ್ಟಡದಲ್ಲಿ ಶಾಲಾ ಕಟ್ಟಡದ ಗೇಟ್ ಮತ್ತು ಶಾಲಾ ಕೊಠಡಿಯ ಬೀಗಒಡೆದು ಕೆಲ ಕಂಪನಿಯವರಿಗೆ ಸಂಬಂಧಿಸಿದ ಸಿಮೆಂಟನ್ನು ಅಕ್ರಮವಾಗಿ ಶೇಖರಿಸಿಟ್ಟ ಆರೋಪ ಕೇಳಿಬಂದಿದೆ.

ಇನ್ನೇನು ಕೆಲವೇ ದಿನಗಳಲ್ಲಿ ಶಾಲೆ ಪ್ರಾರಂಭವಾಗಲಿದ್ದು, ಸಾವಿರಾರು ಸಿಮೆಂಟ್ ಚೀಲಗಳನ್ನು ಸಂಗ್ರಹಿಸಿಟ್ಟ ಕಟ್ಟಡದಲ್ಲಿಯೇ ವಿದ್ಯಾರ್ಥಿಗಳು ಕುಳಿತು ಪಾಠ ಕಲಿಯುವ ಸ್ಥಿತಿ ಎದುರಾಗಿದೆ. ಎಸ್‌ಡಿಎಂಸಿ ಅಧ್ಯಕ್ಷರು ಸಿಮೆಂಟ್ ಚೀಲಗಳನ್ನು ಸಂಗ್ರಹಿಸಿಡುವ ಕುರಿತು ನಮಗೆ ಮೊದಲು ಯಾವುದೇ ಮಾಹಿತಿ ನೀಡಿಲ್ಲ. 2-3 ದಿನಗಳು ಕಳೆದ ನಂತರ ಶಾಲೆಗೆ ಹೋದ ಸಂದರ್ಭದಲ್ಲಿ ಮಾಹಿತಿ ನೀಡಿದ್ದಾರಷ್ಟೇ. ರಾತೋರಾತ್ರಿ ಶಾಲಾ ಕೊಠಡಿಯ ಕೀಲಿಯನ್ನು ಮುರಿದು ಸಾವಿರಾರು ಸಿಮೆಂಟ್ ಚೀಲಗಳನ್ನು ಸಂಗ್ರಹಿಸಲಾಗಿದೆ ಎಂದು ಶಾಲೆಯ ಮುಖ್ಯೋಪಾಧ್ಯಾಯರಾದ ಎಸ್.ಎಫ್. ಗೌರಿ ಆರೋಪಿಸಿದ್ದಾರೆ.

### ಇಂದಿನಿಂದ ದಂಡಿನ ದುರ್ಗಮ್ಮ ಜಾತ್ರೆ ಪ್ರಾರಂಭ

# ಗದಗ ಜನತೆಗೆ ಪೊಲೀಸರ ಜಾಗೃತಿ..!

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಬೆಟಗೇರಿ ಹೊರವಲಯದಲ್ಲಿ ಪ್ರತಿವರ್ಷ ಸಂಪ್ರದಾಯ ಬದ್ಧವಾಗಿ ಆಚರಿಸುವ ದಂಡಿನ ದುರ್ಗಮ್ಮ ಜಾತ್ರೆ ಇಂದಿನಿಂದ ಪ್ರಾರಂಭವಾಗಿದೆ. ಜಾತ್ರೆಗೆ ರಾಜ್ಯ ಹಾಗೂ ಅಂತರಾಜ್ಯದಿಂದ ಭಾರೀ ಸಂಖ್ಯೆಯಲ್ಲಿ ಜನರು ಆಗಮಿಸಲಿದ್ದು, ಕಳ್ಳರ ಬಗ್ಗೆ ಜಾಗೃತಿ ವಹಿಸುವಂತೆ ಗದಗ ಬೆಟಗೇರಿ ನಗರದ ಹಾಗೂ ಸುತ್ತಮುತ್ತಲಿನ ಸಾರ್ವಜನಿಕರಿಗೆ ಜಿಲ್ಲಾ ಪೊಲೀಸರು ಮನವಿ ಮಾಡಿದ್ದಾರೆ.




ಬೆಟಗೇರಿ ಹೊರವಲಯದಲ್ಲಿ ಇಂದಿನಿಂದ ದಂಡಿನ ದುರ್ಗಮ್ಮ ಜಾತ್ರೆ ಪ್ರಾರಂಭವಾಗಿರುವುದರಿಂದ ರಾಜ್ಯ ಹಾಗೂ ಅಂತರಾಜ್ಯದಿಂದ ಅಪಾರ ಸಂಖ್ಯೆಯಲ್ಲಿ ಜನತೆ ಆಗಮಿಸಲಿದ್ದಾರೆ. ಕೆಲವರಿಗೆ ಜಾತ್ರೆ ಸಮಯದಲ್ಲಿ ಏನಾದರೂ ಕಳ್ಳತನ ಮಾಡಿದರೆ ಒಳ್ಳೆಯದಾಗುತ್ತೆ ಎಂಬ ನಂಬಿಕೆ ಇರುವುದರಿಂದ ಅವರು ಕಳ್ಳತನ ಮಾಡುವ ಸಂಭವ ಹೆಚ್ಚು. ಹಾಗಾಗಿ ಎಲ್ಲರೂ ತಮ್ಮ- ತಮ್ಮ ಮನೆಗಳಿಗೆ ಹೊರಗಡೆ ಹೋಗುವಾಗ ಹಾಗೂ ಬೇರೆ ಊರಿಗೆ ಹೋಗುವ ಸಂದರ್ಭಗಳಲ್ಲಿ ಪೊಲೀಸ್ ಇಲಾಖೆಗೆ ಹಾಗೂ ಸಂಬಂಧ ಪಟ್ಟ ಪೊಲೀಸ್ ಠಾಣೆಗೆ ಮಾಹಿತಿಯನ್ನು ನೀಡಿ ಹೋಗತಕ್ಕದ್ದು. ಬೆಲೆಬಾಳುವ ವಸ್ತುಗಳ ಬಗ್ಗೆ ಮತ್ತು ಹೊರಗಡೆ ನಿಲ್ಲಿಸಿದ ಬೈಕ್ ಬಗ್ಗೆ ಕಾಳಜಿ ಇರಲಿ.

ಇನ್ನೂ ಅಂಗಡಿ ಮುಗ್ಗಟ್ಟುಗಳ ವ್ಯಾಪಾರಸ್ಥರು ಬೆಲೆಬಾಳುವ ವಸ್ತುಗಳ ಬಗ್ಗೆ ಸೂಕ್ತ ನಿಗಾ ವಹಿಸಬೇಕು. ಹಾಗೇನಾದ್ರೂ ನಿಮಗೆ ಅನುಮಾನಾಸ್ಪದವಾಗಿ

ಯಾರಾದರೂ ಕಂಡು ಬಂದರೆ ಜಿಲ್ಲೆಯ ಆಯಾ ಠಾಣೆಯ ಪೊಲೀಸರಿಗೆ ಮಾಹಿತಿ ನೀಡಬೇಕು ಹಾಗೂ ERSS-112ಗೆ ಕರೆ ಮಾಡಲು ಗದಗ ಜಿಲ್ಲಾ ಪೊಲೀಸರು ಪ್ರಕಟಣೆ ಹೊರಡಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka